ಸಂಪುಟ : 10 ಸಂಚಿಕೆ: 182 ಪುಟ : 4+2 ಬೆಲೆ: 3.00 ಮಂಗಳವಾರ ಆಗಸ್ಟ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶೆರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 182 Pages : 4+2 Price : 3.00 Tuesday August 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು, 2016 ರ ಅಡಿಯಲ್ಲಿ ಕುಂದುಕೊರತೆ ಪರಿಹಾರ ಸಮಿತಿಯನ್ನು ರಚಿಸಲು ಹುದ್ದೆಯಂತೆ ಅರ್ಜಿ ಆಹ್ವಾನಿಸಲಾಗಿದೆ.

ಮೇಲಿನ ಸಮಿತಿಗೆ ಅಧ್ಯಕ್ಷರು ಮತ್ತು ಸದಸ್ಯರ ಆಯ್ಕೆ ಮಾನದಂಡಗಳು ಈ ಕೆಳಗಿನಂತಿವೆ.

ಅಧ್ಯಕ್ಷರು ನಿವೃತ್ತ ಸಿವಿಲ್ ನ್ಯಾಯಾದೀಶರಾಗಿರಬೇಕು. (65 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿರಬೇಕು) ಸ್ಥಳೀಯ ಸದಸ್ಯರು, ರಾಜ್ಯ ಸರ್ಕಾರದ ನಿವೃತ್ತ ವರ್ಗ–1 ಅಧಿಕಾರಿಯಾಗಿರಬೇಕು. (65 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿರಬೇಕು) ಸ್ಥಳೀಯ ಪ್ರದೇಶದಲ್ಲಿ ನಿಷ್ಪಾಪ ಸೇವಾ ದಾಖಲೆಯನ್ನು ಹೊಂದಿರಬೇಕು. ಪ್ರಸ್ತಾವಿತ ಸಮಿತಿಯ ಅವಧಿಯು ಬಿಡುಗಡೆಯಾದ ದಿನಾಂಕದಿಂದ ಐದು ವರ್ಷಗಳವರೆಗೆ ಚಲಾವಣೆಯಲ್ಲಿರುತ್ತದೆ. ಸಮಿತಿಯ ಕಾರ್ಯಾಚರಣೆಯ ಅಧಿಕಾರ ವ್ಯಾಪ್ತಿಯನ್ನು ಕಾಲ ಕಾಲಕ್ಕೆ ಸರ್ಕಾರವು ಸೂಚಿಸುತ್ತದೆ.

ಕಮಿಟಿ ಸದಸ್ಯರ ಗೌರವಧನ ನಿವೃತ್ತ ಸಿವಿಲ್ ನ್ಯಾಯದೀಶರು ಅಥವಾ ಮ್ಯಾಜಿಸ್ಟ್ರೇಟ್ ಅರೆಕಾಲಿಕ ಆಧಾರದ ಮೇಲೆ ನೇಮಕಗೊಂಡರೆ ದಿನಕ್ಕೆ (ಒಂದು ಸಭೆಗೆ) ಎರಡು ಸಾವಿರದ ಐದನೂರು ರೂಪಾಯಿ ಗೌರವಧನ ಪಡೆಯುತ್ತಾರೆ. ಕುಂದುಕೊರತೆ ಪರಿಹಾರ ಸಮಿತಿಯ ಇತರೆ ಸದಸ್ಯರು ಅರೆಕಾಲಿಕವಾಗಿ ನೇಮಕಗೊಂಡರೆ ದಿನಕ್ಕೆ (ಒಂದು ಸಭೆಗೆ) ಒಂದು ಸಾವಿರ ರೂಪಾಯಿ ಗೌರವಧನ ಪಡೆಯುತ್ತಾರೆ.

ಕುಂದು ಕೊರತೆ ಪರಿಹಾರ ಸಮಿತಿಯ ಕೆಲಸದ ದಿನಗಳು ಮತ್ತು ಕಚೇರಿಯ ಸಮಯಗಳು ಸರ್ಕಾರ ನಿಗಧಿಪಡಿಸಿದಂತೆ ಇರುತ್ತದೆ. ಅರ್ಜಿಗಳನ್ನು ಪ್ರಕಟಗೊಂಡ 30 ದಿನಗಳ ಒಳಗಾಗಿ ಮುಖ್ಯಾಧಿಕಾರಿ ಪಟ್ಟಣ ಪಂಚಾಯತ್ ನರೇಗಲ್ಲ ಇವರ ಕಾರ್ಯಾಲಯದ ಡೇ–ನಲ್ಮ ವಿಭಾಗದಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪಟ್ಟಣ ಪಂಚಾಯತ್ ನರೇಗಲ್ಲ ಡೇ ನಲ್ಮ ವಿಭಾಗದಲ್ಲಿ ಕೇಳಿ ಪಡೆಯಬಹುದಾಗಿದೆ ಎಂದು ನರೇಗಲ್ಲ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಟ್ಟಣದಲ್ಲಿ ಹಿಂದೂ ಧರ್ಮ ಸಂರಕ್ಷಣಾ ಬೃಹತ್ ಜಾಥಾ । ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ

# ಹಿಂದೂ ಧರ್ಮ ಎಂದಿಗೂ ನಾಶವಾಗದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಕೋಟ್ಯಾಂತರ ಹಿಂದೂಗಳ ಶ್ರದ್ಧಾ ಕೇಂದ್ರವಾದ ಶ್ರೀಕ್ಷೇತ್ರ ಧರ್ಮಸ್ಥಳದ ಕ್ಷೇತ್ರದ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಸಮಾಜ ವಿರೋಧಿ ಶಕ್ತಿಗಳ ಕೃತ್ಯವನ್ನು ಖಂಡಿಸಿ ಪಟ್ಟಣದಲ್ಲಿ ವಿವಿಧ ಹಿಂದೂಪರ ಸಂಘಟನೆಗಳು, ಧರ್ಮಸ್ಥಳ ಸಂಘದವರು, ಸಾರ್ವಜನಿಕರು ಸೇರಿ ಪಟ್ಟಣದಲ್ಲಿ ಹಿಂದೂ ಧರ್ಮ ಸಂರಕ್ಷಣಾ ಬೃಹತ್ ಜಾಥಾ ಮೂಲಕ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಅಪಮಾನ ಖಂಡಿಸಿ, ತಹಸೀಲ್ದಾರರ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿದರು.

ಪಟ್ಟಣದ ಹಾವಳಿ ಹನುಮಂತದೇವರ ದೇವಸ್ಥಾನದಿಂದ ಪ್ರಾರಂಭವಾದ ಬೃಹತ್ ಪ್ರತಿಭಟನಾ ಜಾಥಾಕ್ಕೆ ಗಂಜಿಗಟ್ಟಿ, ಬೆಳ್ಳಟ್ಟಿ, ಹೂವಿನಶಿಗ್ಲಿ ಹಾಗೂ ಹರದಗಟ್ಟಿ ಶ್ರೀಗಳು ಮಂಜುನಾಥ ಸ್ವಾಮಿಯ ಚಿತ್ರಕ್ಕೆ ಪುಷ್ಪಗಳನ್ನು ಅರ್ಪಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬೆಳ್ಳಟ್ಟಿ ರಾಮಲಿಂಗೇಶ್ವರ ಮಠದ ಶ್ರೀ ಬಸವರಾಜ ಮಹಾಸ್ವಾಮಿಗಳು ಮಾತನಾಡಿ, ಹಿಂದೂ ಧರ್ಮದ ಪಾವಿತ್ರ್ಯತೆಯನ್ನು, ಒಗ್ಗಟ್ಟನ್ನು ಹಾಳು ಮಾಡಲು ನೂರಾರು ವರ್ಷಗಳಿಂದ ಸಂಚುಗಳು ನಡೆಯುತ್ತಲೇ ಇವೆ. ಸಾವಿರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿರುವ ಹಿಂದೂ ಧರ್ಮ ಎಂದಿಗೂ ನಾಶವಾಗುವುದಿಲ್ಲ ಎನ್ನುವದನ್ನು ಹಿಂದೂ ವಿರೋಧಿಗಳು ಅರ್ಥ ಮಾಡಿಕೊಳ್ಳಬೇಕು. ಶ್ರೀ–ಕ್ಷೇತ್ರ ಧರ್ಮಸ್ಥಳ ದೇಶಾದ್ಯಂತ ಕೋಟ್ಯಾಂತರ ಭಕ್ತರನ್ನು ಹೊಂದಿದ್ದು, ಹಿಂದೂಗಳ ಧಾರ್ಮಿಕ ಭಾವನೆಗಳನ್ನು ಅಪಮಾನಿಸುವ ದುರುದ್ದೇಶದಿಂದ ಕೆಲ ಕಿಡಿಗೇಡಿಗಳು ಸುಳ್ಳು, ಅಪಪ್ರಚಾರ ಮಾಡುತ್ತಿದ್ದಾರೆ. ಹಿಂದೂ ಧರ್ಮದ ಜನರನ್ನು ದಿಕ್ಕು ತಪ್ಪಿಸುವ ಷಡ್ಯಂತ್ರ, ಪಿತೂರಿ ನಿಲ್ಲಬೇಕು ಎಂದರು.

ಶ್ರೀ ಫಕೀರ ದಿಂಗಾಲೇಶ್ವರ ಸ್ವಾಮಿಗಳು ದೂರವಾಣಿಯ ಮೂಲಕ ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದರು. ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಮಂಜುನಾಥ ಮಾಗಡಿ, ರವಿಕಾಂತ ಅಂಗಡಿ, ಬಸವೇಶ ಮಹಾಂತಶೆಟ್ಟರ, ನಾಗರಾಜ ಚಿಂಚಲಿ, ಪೂರ್ಣಾಜಿ ಕರಾಟೆ, ಬಸಣ್ಣ ಬೆಂಡಿಗೇರಿ, ಹೊನ್ನಪ್ಪ ವಡ್ಡರ ಮಾತನಾಡಿ, ಯಾವುದೋ ಅನಾಮಿಕ ಆರೋಪ ಮಾಡಿದಾಕ್ಷಣ ಎಸ್ಐಟಿ ರಚನೆ ಮಾಡಿ ಕಂಡ ಕಂಡಲೆಲ್ಲ ಗುಂಡಿ ತೋಡಿದರೂ ಯಾವದೇ ಕುರುಹು ದೊರೆತಿಲ್ಲ. ಅನಾಮಿಕನ ಹಿಂದಿರುವ ದುಷ್ಟ ▶▶4ನೇ ಪುಟಕ್ಕೆ

> ಗಂಜಿಗಟ್ಟಿಯ ಡಾ. ವೈಜನಾಥ ಮಹಾಸ್ವಾಮಿಗಳು, ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು, ಆದರಳ್ಳಿಯ ಕುಮಾರ ಮಹಾರಾಜರು ಮಾತನಾಡಿ, ನಾಡಿನ ಪುಣ್ಯ ಕ್ಷೇತ್ರಗಳನ್ನು ಗುರಿಯಾಗಿಸಿ ನಡೆಯುತ್ತಿರುವ ಷಡ್ಯಂತ್ರವನ್ನು ತಡೆಯುವಲ್ಲಿ ಉಗ್ರ ಹೋರಾಟ ನಡೆಸಲೂ ನಾವು ಹಿಂಜರಿಯುವುದಿಲ್ಲ. ನಾಡಿನ ಮಠ–ಮಾನ್ಯಗಳ ಅಸ್ತಿತ್ವಕ್ಕೆ ಧಕ್ಕೆ ತರುವ ಕಾರ್ಯ ನಿಲ್ಲಬೇಕು. ಇದು ಒಂದು ದಿನದ ಹೋರಾಟವಲ್ಲ, ಹಿಂದೂ ಧರ್ಮದ ವಿರುದ್ಧ ನಡೆಯುವ ಹೋರಾಟಕ್ಕೆ ಮಠಾಧೀಶರು ಸದಾ ಬೆಂಬಲ ನೀಡುತ್ತೇವೆ ಎಂದು ನುಡಿದರು.

## ಸಾಮೂಹಿಕ ಮದುವೆ ಕಾರ್ಯಕ್ರಮಕ್ಕೆ ಆಹ್ವಾನ



■ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 14ರಂದು ಹಮ್ಮಿಕೊಂಡಿರುವ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಹಜರತ್ ಖಾಜಾ ಬಂದೆ ನವಾಜ್ ಅವರ ವಂಶಸ್ಥರು ಹಾಗೂ ಸಜ್ಜಾದ ನಸೀನರಾದ ಅಲಿ ಜನಾಬ ಹಜರತ್ ಹಫೀಜ್ ಸಯ್ಯದ್ ಮೊಹಮ್ಮದ್ ಅಲ್ ಹುಸೇನ್ ಅವರನ್ನು ಸೋಮವಾರ ಭೇಟಿಯಾಗಿ ಆಹ್ವಾನ ನೀಡಿ ಆಶೀರ್ವಾದ ಪಡೆಯಲಾಯಿತು.

ಈ ಸಂದರ್ಭದಲ್ಲಿ ಅಂಜುಮನ್ ಎ ಇಸ್ಲಾಂ ಕಮಿಟಿಯ ಆಡಳಿತ ಮಂಡಳಿ ಹಾಗೂ ಹುಬ್ಬಳ್ಳಿಯ ದಾದಾಹಯಾತ್ ಖೈರಾತಿ ಹಾಗೂ ಖಿದಮತ್ ಏ ಮಿಲ್ಲತ್ ನ ಗ್ರೂಪ್ ನ ಸದಸ್ಯರು ಹಾಜರಿದ್ದರು.

ಹುಬ್ಬಳ್ಳಿ ಅಂಜುಮನ್ ಕಮಿಟಿ ಖಜಾಂಚಿ ಜನಾಬ್ ದಾದಾಹಯಾತ್ ಖೈರಾತಿ, ಅಂಜುಮನ್ ಏ ಕಮಿಟಿ ಅಧ್ಯಕ್ಷರಾದ ತಾಜುದ್ದೀನ್ ಎಮ್ ಕಿಂಡ್ರಿ, ಹೈದರ್ ಖವಾಸ, ಮುನ್ನಾ ಢಾಲಾಯತ, ಜನಾಬ್ ಎಮ್ ಏ ಖಾಜಿ, ದಾವಲಸಾಬ್ ಲಕ್ಷ್ಮೇಶ್ವರ, ದಾವೂದ್ ಜಮಾಲ್,ಲಾಲಸಾಬ ಮಕಂದಾರ, ಚಮನ್ ಹಾದಿಮನಿ, ರಾಜೇಸಾಬ ಸೈಯದಬಡೇ, ಹುಸೇನ್ ಅಕ್ಕಿ, ಮಹಬೂಲಿ ಕುರ್ತಕೋಟಿ, ಮಾಬುಲಿ ದುರ್ಗಿಗುಡಿ ಇದ್ದರು.

### ಬಿಂಕದಕಟ್ಟಿ ಗ್ರಾಮದ ಬೆಳೆ ಹಾನಿ ಪ್ರದೇಶಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭೇಟಿ

# ರೈತರಿಗೆ ಪರಿಹಾರದ ಭರವಸೆ

■ವಿಜಯಸಾಕ್ಷಿ ಸುದ್ದಿ, ಗದಗ



ಹವಾಮಾನ ಬದಲಾವಣೆ ಮತ್ತು ನಿರಂತರ ಮಳೆಯ ಪರಿಣಾಮವಾಗಿ ರೈತರ ಜೀವನೋಪಾಯಕ್ಕೆ ತೀವ್ರ ಧಕ್ಕೆಯಾಗುತ್ತಿದ್ದು, ಗದಗ ತಾಲೂಕಿನ ಬಿಂಕದಕಟ್ಟಿ ಗ್ರಾಮದ ಬೆಳೆ ಹಾನಿ ಪ್ರದೇಶಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭಾನುವಾರ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಬಿಂಕದಕಟ್ಟಿ ರೈತ ಶ್ರೀನಿವಾಸ್ ಇಟಗಿ ಅವರ 10 ಎಕರೆಯ ಹೊಲದಲ್ಲಿನ ಹೆಸರು ಬೆಳೆ ಸಂಪೂರ್ಣ ಹಾನಿಗೊಳಗಾದ ಹಿನ್ನೆಲೆಯಲ್ಲಿ ಸಚಿವರು ಬೆಳೆಹಾನಿ ವೀಕ್ಷಣೆ ನಡೆಸಿ ಪರಿಹಾರದ ಭರವಸೆ ನೀಡಿದರು. ಹೊಲದಲ್ಲಿ ಹೆಸರು ಬೆಳೆ ಅಧಿಕ ಮಳೆಯಿಂದ ಹಾಳಾದ ದೃಶ್ಯವನ್ನು ಕಂಡ ಸಚಿವರು, ರೈತರಿಗೆ ತಕ್ಷಣ ಪರಿಹಾರ ಒದಗಿಸುವ ಭರವಸೆ ನೀಡಿ, ಅಧಿಕಾರಿಗಳಿಗೆ ನಿಖರ ಸಮೀಕ್ಷೆ ನಡೆಸಿ ಹಾನಿಗೊಳಗಾದ ಪ್ರತಿ ಎಕರೆಯ ಲೆಕ್ಕವನ್ನು ದಾಖಲಿಸುವಂತೆ ಸೂಚನೆ ನೀಡಿದರು. ರೈತರ ಕಷ್ಟವನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ, ಅವರಿಗೆ ಸರ್ಕಾರದಿಂದ ಎಲ್ಲಾ ರೀತಿಯ ಸಹಾಯ ದೊರೆಯಬೇಕು ಎಂದು ತಿಳಿಸಿದರು.

ಹೆಸರು ಬೆಳೆ ಬಿತ್ತನೆಗೆ ರೈತರು ಹೆಚ್ಚಿನ ವೆಚ್ಚ ಮಾಡಿರುವಾಗ, ನಿರಂತರ ಮಳೆಯಿಂದಾಗಿ ಬೆಳೆ ನಷ್ಟ ಉಂಟಾಗಿದೆ. ಒಂದು ಎಕರೆಗೆ ಹತ್ತಾರು ಸಾವಿರ ರೂಪಾಯಿ ವೆಚ್ಚ ಮಾಡುವ ರೈತರಿಗೆ ಬೆಳೆ ಹಾನಿ ಜೀವನಾಧಾರಕ್ಕೆ ದೊಡ್ಡ ಹೊಡೆತವಾಗಿದೆ ಎಂದರು.

ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ, ಹಾನಿ ಅಂಕಿ–ಅಂಶಗಳನ್ನು ಸರಿಯಾಗಿ ಸಂಗ್ರಹಿಸುವಂತೆ ಹಾಗೂ ರೈತರಿಗೆ ಶೀಘ್ರ ಪರಿಹಾರ ಒದಗಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಸಚಿವ ಎಚ್.ಕೆ. ಪಾಟೀಲ ಸೂಚಿಸಿದರು.

ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳಾದ ಈರುಳ್ಳಿ ಹಾಗೂ ಮೆಣಸಿನಕಾಯಿ 24000 ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆಯಾಗಿತ್ತು. ಈವರೆಗೆ 9800 ಹೆಕ್ಟೇರ ಪ್ರದೇಶ ಹಾನಿಯಾಗಿದ್ದು, ಸಮೀಕ್ಷೆ ಕಾರ್ಯ ಮುಂದುವರೆದಿದೆ. ಗದಗ ತಾಲೂಕಿನಲ್ಲಿ ಈರುಳ್ಳಿ 802 ಹೆಕ್ಟರ್, ಮೆಣಸಿನಕಾಯಿ 3273 ಹೆಕ್ಟರ್ ಹಾನಿಗೊಳಗಾಗಿದ್ದು, ಗದಗ ತಾಲೂಕು ಒಂದರಲ್ಲಿಯೇ 4075 ಹೆಕ್ಟರ್ ಪ್ರದೇಶ ಹಾನಿಗೊಳದಾಗಿದೆ ಎಂದು ಪ್ರಾಥಮಿಕ ಸಮೀಕ್ಷೆ ಮೂಲಕ ಅಂದಾಜಿಸಲಾಗಿದೆ ಎಂದು ಅಧಿಕಾರಿಗಳು ವರದಿ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಸಹಾಯಕ ಆಯುಕ್ತ ಗಂಗಪ್ಪ ಎಂ., ತಹಸೀಲ್ದಾರ ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ, ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಶೈಲೇಂದ್ರ ಬಿರಾದಾರ ಸೇರಿದಂತೆ ಅಧಿಕಾರಿಗಳು, ಸ್ಥಳೀಯ ಗಣ್ಯರು ಉಪಸ್ಥಿತರಿದ್ದರು.

> **ಬೆಳೆ ಹಾನಿ**
>
> ಗದಗ ಜಿಲ್ಲೆಯಲ್ಲಿ ಆ.1ರಿಂದ 18ರವರೆಗೆ ವಾಡಿಕೆ ಮಳೆ 46.9 ಎಂಎಂ ಇತ್ತು, 140.2ರಷ್ಟು ಮಳೆ ಆಗುವ ಮುಲಕ ಶೇ. 198.9ರಷ್ಟು ಅಧಿಕವಾಗಿದೆ. ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ 292826 ಹೆಕ್ಟರ್ ಬಿತ್ತನೆ ಮಾಡಲಾಗಿದ್ದು, 94884 ಹೆಕ್ಟೇರ್ ಬೆಳೆ ಹಾನಿಗೀಡಾಗಿದೆ. ಇದರಲ್ಲಿ ಹೆಸರು ಬೆಳೆ 67533 ಹೆ ಹಾನಿಯಾಗಿದೆ ಎಂದು ಪ್ರಾಥಮಿಕ ಸಮೀಕ್ಷೆ ಮೂಲಕ ಅಂದಾಜಿಸಲಾಗಿದೆ. ಸಮೀಕ್ಷಾ ಕಾರ್ಯ ಮುಂದುವರೆದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

## ವಿದ್ಯಾರ್ಥಿಗಳು ದೈಹಿಕವಾಗಿ ಸದೃಢರಾಗಿ


■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿದ್ಯಾರ್ಥಿ ಜೀವನದಲ್ಲಿ ಪಿಯುಸಿ ಘಟ್ಟವು ಪ್ರಮುಖವಾಗಿದ್ದು, ಈ ಸಂದರ್ಭದಲ್ಲಿ ಯಾವುದೇ ದುಶ್ಚಟಗಳಿಗೆ ಬಲಿಯಾಗದೇ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಹ ಭಾಗಿಯಾಗಿ ದೈಹಿಕವಾಗಿ ಸದೃಢರಾಗಿ ಸಮೃದ್ಧ ಜೀವನ ನಡೆಸಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿಯ ಶ್ರೀ ಎಸ್.ಎಂ. ಡಬಾಲಿ ತಾಲೂಕಾ ಕ್ರೀಡಾಣಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಹಾಗೂ ಎಫ್.ಬಿ. ಪೂಜಾರ ಸರಕಾರಿ ಪದವಿಪೂರ್ವ ಕಾಲೇಜು ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ 2025–26ನೇ ಸಾಲಿನ ಶಿರಹಟ್ಟಿ ತಾಲೂಕು ಮಟ್ಟದ ಪದವಿಪೂರ್ವ ಕಾಲೇಜುಗಳ ಕ್ರೀಡಾಕೂಟ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಒಂದೊಂದು ಪ್ರತಿಭೆ ಇರುತ್ತದೆ. ಇದನ್ನು ಹೊರಹಾಕುವುದಕ್ಕೆ ಇಂತಹ ಕ್ರೀಡಾಕೂಟಗಳು ಉತ್ತಮ ವೇದಿಕೆಯಾಗಿದ್ದು, ಇದನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಂಡು ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿ, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ, ಕಾಲೇಜಿಗೆ, ತಂದೆ–ತಾಯಿಗೆ ಕೀರ್ತಿ ತರುವಂತವರಾಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ನಾಗರಾಜ ಲಕ್ಕುಂಡಿ, ಶಂಕರ ಮರಾಠೆ, ಪ್ರಾಚಾರ್ಯ ಬಿ.ಜಿ. ಗಿರಿತಮ್ಮಣ್ಣವರ, ಎಂ.ಸಿ. ಭಜಂತ್ರಿ, ಹೊನ್ನಪ್ಪ ಶಿರಹಟ್ಟಿ, ಸಿ.ಸಿ. ನೂರಶೆಟ್ಟರ, ತಿಪ್ಪಣ್ಣ ಕೊಂಚಿಗೇರಿ, ರಾಮಣ್ಣ ಕಂಬಳಿ ಮುಂತಾದವರು ಉಪಸ್ಥಿತರಿದ್ದರು.




### ಪರಿಶಿಷ್ಟ ಜಾತಿ ಸಮುದಾಯದಿಂದ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಶಾಸಕ ಜಿ.ಎಸ್. ಪಾಟೀಲ

# ದಶಕಗಳ ಹೋರಾಟಕ್ಕೆ ಸಿಕ್ಕ ಜಯ



■ವಿಜಯಸಾಕ್ಷಿ ಸುದ್ದಿ, ರೋಣ

ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಎಲ್ಲ ಸಮುದಾಯಗಳ ಹಿತವನ್ನು ಬಯಸಿ ಒಳ ಮೀಸಲಾತಿಯನ್ನು ಜಾರಿಗೊಳಿಸಿದ್ದು, ದಶಕಗಳ ಹೋರಾಟಕ್ಕೆ ಸಿಕ್ಕ ಜಯವಾಗಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಸೋಮವಾರ ಪರಿಶಿಷ್ಟ ಜಾತಿ ಸಮುದಾಯದವರು ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಸಮುದಾಯದ ಮುಖಂಡರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಒಳ ಮೀಸಲಾತಿ ಜಾರಿಯಾಗಬೇಕು ಎಂಬ ಕೂಗು ಹಲವು ದಶಕಗಳದ್ದು. ವಿಪರ್ಯಾಸವೆಂದರೆ, ಬಿಜೆಪಿ ಅಥವಾ ಜೆಡಿಎಸ್ ಪಕ್ಷಗಳು ಅಧಿಕಾರದಲ್ಲಿದ್ದಾಗ ತುಳಿತಕ್ಕೆ ಒಳಗಾದ ಸಮುದಾಯಗಳಿಗೆ ನ್ಯಾಯ ಒದಗಿಸುವ ಕೆಲಸವನ್ನು ಮಾಡಲಿಲ್ಲ. ಬದಲಾಗಿ ಇಲ್ಲ–ಸಲ್ಲದ ಸಬೂಬುಗಳನ್ನು ಹೇಳುತ್ತಾ ಸಮಾಜದಲ್ಲಿ ಗೊಂದಲ ಮೂಡಿಸುವ ಕೆಲಸ ಮಾಡಿದರು. ಆದರೆ ಕಾಂಗ್ರೆಸ್ ಸರಕಾರ ತಾನು ಕೊಟ್ಟ ಮಾತಿನಂತೆ ಯಾವುದೇ ಸಮುದಾಯಗಳಿಗೆ ಅನ್ಯಾಯವಾಗದ ರೀತಿಯಲ್ಲಿ ಒಳ ಮೀಸಲಾತಿಯನ್ನು ಹಂಚಿಕೆ ಮಾಡುವ ಜೊತೆಗೆ ಸಾಮಾಜಿಕ ನ್ಯಾಯ ಒದಗಿಸುವ ಕಾರ್ಯ ಮಾಡಿದ್ದು ಸ್ವಾಗತಾರ್ಹವಾಗಿದೆ ಎಂದರು.

ಮುಖಂಡ ಶರಣು ಪೂಜಾರ ಮಾತನಾಡಿ, ಸರಕಾರ ಎಲ್ಲ ಸಮುದಾಯಗಳನ್ನು ಏಕತೆಯಿಂದ ಕಾಣಬೇಕು. ರಾಜ್ಯದಲ್ಲಿ ಆಡಳಿತ ಮಾಡುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಯಾವುದೇ ಸಮಾಜಕ್ಕೆ ಅನ್ಯಾಯವಾಗದ ರೀತಿಯಲ್ಲಿ ನ್ಯಾಯಸಮ್ಮತವಾಗಿ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ. ಇದು ನಮ್ಮ ಮುಂದಿನ ಪೀಳಿಗೆಯ ಭವಿಷ್ಯಕ್ಕೆ ಬೆಳಕು ನೀಡಲಿದ್ದು, ರಾಜ್ಯ ಸರಕಾರದ ನಿರ್ಧಾರವನ್ನು ಮುಕ್ತ ಮನಸ್ಸಿನಿಂದ ಸ್ವಾಗತಿಸಿದ್ದೇವೆ. ಒಳ ಮೀಸಲಾತಿ ಹೋರಾಟಕ್ಕೆ ಶಕ್ತಿ ತುಂಬಿದ್ದು ಶಾಸಕ ಜಿ.ಎಸ್.ಪಾಟೀಲರು. ಹೀಗಾಗಿ ಅವರನ್ನು ಇಂದು ಸಮಾಜದ ವತಿಯಿಂದ ಸತ್ಕರಿಸಲಾಗಿದೆ ಎಂದರು. ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಹನ್ಮಂತ ನಾಗರಾಜ, ವಿಜಯ ಕಲ್ಮನಿ, ಪ್ರಕಾಶ ಹೊಸಳ್ಳಿ, ಸೋಮು ನಾಗರಾಜ, ಮೈಲಾರಪ್ಪ ಚಳ್ಳಮರದ, ಸಂಗಪ್ಪ ಹುಲ್ಲೂರ, ಅಂದಪ್ಪ ದ್ಯಾಸಲ, ಬಾಳಪ್ಪ ಬುರಡಿ, ಸುರೇಶ ನಡವಿನಮನಿ, ಸಿದ್ದಪ್ಪ ಹಲಗಿ, ಶಿವಪ್ಪ ಮಾದರ, ಬಸವರಾಜ ಕಡಬಿನ, ಶರಣಪ್ಪ ದೊಡ್ಡಮನಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

> ಕಾಂಗ್ರೆಸ್ ಪಕ್ಷ ಸಂವಿಧಾನದ ಅಡಿಯಲ್ಲಿ ತನ್ನ ಕಾರ್ಯವನ್ನು ನಿರ್ವಹಿಸುತ್ತಾ ಬಂದಿದೆ. ಸಮಾಜದ ಎಲ್ಲ ವರ್ಗದ ಜನರಿಗೂ ನ್ಯಾಯ ಒದಗಿಸಬೇಕು ಎನ್ನುವುದು ಕಾಂಗ್ರೆಸ್ ಪಕ್ಷದ ಮೊದಲ ಆಶಯ. ಸಂವಿಧಾನದ ಪರಿಕಲ್ಪನೆಯಂತೆ ಸರಕಾರ ಒಳ ಮೀಸಲಾತಿಯನ್ನು ಜಾರಿಗೊಳಿಸಿದ್ದು, ಇದರಿಂದ ಯಾವುದೇ ಸಮುದಾಯಗಳಿಗೆ ಅನ್ಯಾಯವಾಗುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಳ ಮೀಸಲಾತಿ ಜಾರಿಗೊಳಿಸಿರುವುದನ್ನು ಎಲ್ಲರೂ ಸ್ವಾಗತಿಸಿದ್ದಾರೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

## ಸಂಪಾದಕೀಯ

# ದಸರಾ ಉದ್ಘಾಟನೆ: ವಿವಾದದ ಹಿಂದಿನ ರಾಜಕೀಯ ಮತ್ತು ವೈರುಧ್ಯ

ಈ ಬಾರಿಯ ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವುದು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಬಿಜೆಪಿ ನಾಯಕರು ಈ ಆಯ್ಕೆಯನ್ನು ವಿರೋಧಿಸಿ, ಧರ್ಮಶ್ರದ್ಧೆಯ ಕೊರತೆಯ ಬಗ್ಗೆ ಪ್ರಶ್ನೆ ಎತ್ತಿದ್ದಾರೆ.

ಆದರೆ, ಇದೇ ವಿಷಯಕ್ಕೆ ಸಂಬಂಧಿಸಿದಂತೆ ಮೈಸೂರು ರಾಜಮನೆತನದ ಯದುವೀರ ಒಡೆಯರ್ ಅವರು ಬಾನು ಮುಷ್ತಾಕ್ ಆಯ್ಕೆಯನ್ನು ಸ್ವಾಗತಿಸಿರುವುದು, ವಿರೋಧದ ಹಿಂದಿನ ವೈರುಧ್ಯವನ್ನು ಎತ್ತಿ ತೋರಿಸುತ್ತದೆ.

ಈ ಹಿಂದೆ ಕವಿ ಕೆ.ಎಸ್. ನಿಸಾರ್ ಅಹ್ಮದ್ ಅವರು ದಸರಾ ಉದ್ಘಾಟನೆ ಮಾಡಿದಾಗ ಯಾವುದೇ ವಿರೋಧ ವ್ಯಕ್ತವಾಗಿರಲಿಲ್ಲ. ನಿಸಾರ್ ಅಹ್ಮದ್ ಕೂಡ ಮುಸ್ಲಿಂ ಸಮುದಾಯಕ್ಕೆ ಸೇರಿದವರಾಗಿದ್ದರೂ, ಅವರ ಕನ್ನಡ ಪ್ರೇಮವನ್ನು ಎಲ್ಲರೂ ಗೌರವಿಸಿದ್ದರು. ಹಾಗಾದರೆ, ಇದೇ ಹಿನ್ನೆಲೆಯಲ್ಲಿ ಬಾನು ಮುಷ್ತಾಕ್ ಅವರ ಆಯ್ಕೆಗೆ ಏಕೆ ಇಷ್ಟೊಂದು ವಿರೋಧ?

ನಿಸಾರ್ ಅಹ್ಮದ್ ಮತ್ತು ಬಾನು ಮುಷ್ತಾಕ್ ಇಬ್ಬರೂ ಸಾಹಿತ್ಯ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದವರು. ಆದರೆ, ನಿಸಾರ್ ಅಹ್ಮದ್ ಅವರ ಆಯ್ಕೆ ಇದ್ದಾಗ ಬಿಜೆಪಿ ಅಧಿಕಾರದಲ್ಲಿತ್ತು. ಈಗ ಕಾಂಗ್ರೆಸ್ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿರುವುದರಿಂದ, ಅದು ರಾಜಕೀಯ ದೃಷ್ಟಿಕೋನದಿಂದ ವಿರೋಧಿಸಲ್ಪಡುತ್ತಿದೆ ಎಂಬುದು ಸ್ಪಷ್ಟ.

ಬಾನು ಮುಷ್ತಾಕ್ ಅವರ ವಿಚಾರಧಾರೆ ಮತ್ತು ಹಿಂದುತ್ವ ಪರ ಸಂಘಟನೆಗಳ ನಿಲುವುಗಳ ನಡುವೆ ಭಿನ್ನಾಭಿಪ್ರಾಯಗಳಿರಬಹುದು, ಆದರೆ ದಸರಾ ಕಾರ್ಯಕ್ರಮದ ಉದ್ಘಾಟನೆಯನ್ನು ವ್ಯಕ್ತಿಯ ಕಲೆ, ಸಾಹಿತ್ಯ ಮತ್ತು ಸಾಮಾಜಿಕ ಕೊಡುಗೆಯ ಆಧಾರದ ಮೇಲೆ ನಿರ್ಧರಿಸಬೇಕು, ಅವರ ಧರ್ಮ ಅಥವಾ ರಾಜಕೀಯ ಸಿದ್ಧಾಂತದ ಆಧಾರದ ಮೇಲೆ ಅಲ್ಲ.

ದಸರಾ ಕೇವಲ ಒಂದು ಧಾರ್ಮಿಕ ಕಾರ್ಯಕ್ರಮವಲ್ಲ, ಅದು ನಾಡಹಬ್ಬ. ಎಲ್ಲ ಸಮುದಾಯಗಳೂ ಸೇರಿ ಆಚರಿಸುವ ಒಂದು ಸಂಭ್ರಮ. ಬಾನು ಮುಷ್ತಾಕ್ ಅವರನ್ನು ಆಹ್ವಾನಿಸುವುದು, ಈ ಹಬ್ಬದ ಅಂತರ್ಗತ ಸ್ವರೂಪಕ್ಕೆ ಪೂರಕವಾಗಿದೆ. ಯದುವೀರ ಒಡೆಯರ್ ಅವರ ಬೆಂಬಲ ಕೂಡ ಇದೇ ಅಂಶವನ್ನು ಎತ್ತಿ ತೋರಿಸುತ್ತದೆ.

ಈ ವಿವಾದ ರಾಜಕೀಯ ಲಾಭಕ್ಕಾಗಿ ಸೃಷ್ಟಿಯಾಗಿದೆಯೇ ಹೊರತು, ನಿಜವಾದ ಧರ್ಮ ಅಥವಾ ಸಂಸ್ಕೃತಿಯ ಕಾಳಜಿಯಿಂದಲ್ಲ. ನಾಡಹಬ್ಬವನ್ನು ರಾಜಕೀಯಕ್ಕೆ ಬಳಸಿಕೊಳ್ಳುವ ಬದಲು, ಎಲ್ಲರೂ ಒಟ್ಟಾಗಿ ಅದನ್ನು ಆಚರಿಸುವುದು ಹೆಚ್ಚು ಸೂಕ್ತ.

### ಕೋಡಿಕೊಪ್ಪದ ವೀರಪ್ಪಜ್ಜನವರ ಜೀವನ ದರ್ಶನ ಪ್ರವಚನ ಸಮಾರೋಪ

# ಪುರಾಣ ಪುಣ್ಯ ಕತೆಗಳಿಂದ ಸದ್ಭಾವನೆ ವೃದ್ಧಿ



■ ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ಪರೋಪಕಾರಿಯಾಗಿರಬೇಕು, ಧರ್ಮವು ಅವನಲ್ಲಿರಬೇಕು. ಜಗವೆಲ್ಲ ನಗುತ್ತಿರಲಿ ಜಗದಳವು ನನಗಿರಲಿ ಎಂಬಂತೆ ಸಕಲರಿಗೆ ಲೇಸನ್ನು ಬಯಸುವ ಮನಸ್ಸು ನಮ್ಮದಾಗಿರಬೇಕು. ಪುರಾಣ ಪುಣ್ಯ ಕತೆಗಳು ಮನುಷ್ಯನಲ್ಲಿ ಧಾರ್ಮಿಕ ಭಾವನೆಯೊಂದಿಗೆ ವಿಚಾರ ಹಾಗೂ ವಿವೇಚನವನ್ನುಂಟುಮಾಡುತ್ತವೆ ಎಂದು ಅಣ್ಣಿಗೇರಿ ದಾಸೋಹಮಠದ ಪೂಜ್ಯ ಸದ್ಗುರು ಡಾ. ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.

ಅವರು ರವಿವಾರ ಗದುಗಿನ ರಾಜೀವ ಗಾಂಧಿ ನಗರದ ಈಶ್ವರ ಬಡಾವಣೆಯ ಶ್ರೀ ಈಶ್ವರ ಸಮುದಾಯ ಭವನ ಹಾಗೂ ಶ್ರೀ ಈಶ್ವರ ಸೇವಾ ಟ್ರಸ್ಟ್ ಉದ್ಘಾಟನಾ ಸಮಾರಂಭ ಮತ್ತು ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪ್ರವಚನ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಶ್ರಾವಣ ಮಾಸದ ಪ್ರಯುಕ್ತ 13ನೇ ವರ್ಷದ ಪುರಾಣದಲ್ಲಿ ಪ್ರವಚನಕಾರರಾದ ಮುಖ್ಯೋಪಾಧ್ಯಾಯ ಎಸ್.ಬಿ. ದೊಡ್ಡಣ್ಣವರ ಅವರಿಂದ ಸಾಗಿ ಬಂದ ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪ್ರವಚನ ಮಹಾ ಮಂಗಲಗೊಂಡಿತು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗದಗ-ಬೆಟಗೇರಿ ನಗರಸಭೆಯ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ಮಾತನಾಡಿ, ಪುರಾಣವು ನಮ್ಮಲ್ಲಿ ಜಾಗೃತಿಯನ್ನುಂಟು ಮಾಡುತ್ತದೆ. ಈಶ್ವರ ಸೇವಾ ಟ್ರಸ್ಟ್‌ದಿಂದ ಅಭಿವೃದ್ಧಿ ಕಾರ್ಯಗಳು ನಡೆಯಲಿ ಎಂದರು.

ಸಮಾರಂಭದಲ್ಲಿ ವಿವಿಧ ಕ್ಷೇತ್ರದ ಸಾಧಕರು ಹಾಗೂ ದಾನಿಗಳಾದ ಎನ್.ಎಂ. ಪಾಟೀಲ, ಬಸವರಾಜ ಮಾಲಗಿತ್ತಿ, ಶರಣಪ್ಪ ನವಲಗುಂದ, ಹುಚ್ಚಣ್ಣ ಶಹಪೂರ, ಸಿದ್ಧಲಿಂಗಪ್ಪ ಹಟ್ಟಿ, ಸಂಗಪ್ಪ ಹೊನ್ನಪ್ಪನವರ, ಯಮನಪ್ಪ ತಳವಾರ, ಬೂದಪ್ಪ ನರ್ತಿ, ಎಂ.ಎಂ. ಕುಬಸದ, ಎಸ್.ಟಿ. ಗೌಡರ, ವ್ಹಿ.ಎಸ್. ಶಿವಸಿಂಪರ, ಜಿ.ಬಿ. ಬೆಳಹಾರ, ಗುರುಪುತ್ರಪ್ಪ ಶಿವಸಿಂಪಿ, ಕೆ.ಎಸ್. ಕೋರಿಮಠ, ರಾಜೇಸಾಬ ಇರಕಲ್ಲ, ಸುಭಾಸ ದೊಡ್ಡಮನಿ, ನೀಲಾಂಬಿಕೆ ತೋಟದ, ಭಾಗ್ಯಲಕ್ಷ್ಮೀ ಶಿರೋಳ, ಪ್ರಭಾವತಿ ಜುಕ್ತಿಮಠ, ಪ್ರೇಮಾ ದೇಶಪ್ಪನವರ, ಶಿವಗಂಗಾ ಶಿವನಗುತ್ತಿ, ರಾಜೇಶ್ವರಿ ಸಂತೋಜಿ, ರೇಣುಕಾ ಕಂಬಳಿ, ಸುವರ್ಣಾ ಮುದೇನಗುಡಿ, ಲೀಲಾವತಿ ಪಾಟೀಲ, ಸಂಪದಾ ಪಾಟೀಲ, ಸರಸ್ವತಿ ನಾಯರಿ, ಬಸವ್ವ ಕೋಳೋರ, ವಿಜಯಶ್ರೀ ಇಲಕಲ್ಲ, ಸುಮಾ ಸೋಮನಗೌಡ್ರ, ಲಕ್ಷ್ಮೀದೇವಿ ದಂಡಿನ, ಲಕ್ಷ್ಮೀ ಅಬ್ಬಿಗೇರಿ, ಜಯಸುಧಾ ನಾಯ್ಕರ್, ಶೋಭಾ ಅಂಗಡಿ, ಪುಷ್ಪಾ ಮಾಕಾಪೂರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯ ಮೇಲೆ ಟ್ರಸ್ಟ್‌ನ ಗೌರವ ಅಧ್ಯಕ್ಷ ಚನ್ನಬಸಪ್ಪ ಅಕ್ಕಿ, ಅಧ್ಯಕ್ಷ ಮಲ್ಲಿಕಾರ್ಜುನ ಸಂತೋಜಿ, ಕಾರ್ಯದರ್ಶಿ ಕುಬೇರಕುಮಾರ ಕಂಬಳಿ, ಖಜಾಂಚಿ ಶಿವಯೋಗಯ್ಯ ಹಿರೇಮಠ, ಉಪಾಧ್ಯಕ್ಷರಾದ ಸುವರ್ಣಾ ವಸ್ತ್ರದ, ಮಹಾದೇವಪ್ಪ ಕೋಳೋರ, ಚನ್ನಯ್ಯ ಹಿರೇಹಾಳಮಠ, ಎಂ.ಡಿ. ಮಾವಿನಕಾಯಿ, ಸಹ ಕಾರ್ಯದರ್ಶಿಗಳಾದ ಚನ್ನಮ್ಮ ಸಂಶಿ, ಗಿರೀಶ್ ಮಾವಿನಕಾಯಿ, ಸಹಖಜಾಂಚಿ ಪ್ರಕಾಶ ಮ್ಯಾಗೇರಿ ಉಪಸ್ಥಿತರಿದ್ದರುಕಾರ್ಯಕ್ರಮದಲ್ಲಿ ನಿರ್ದೇಶಕ ಮಂಡಳಿಯ ಸದಸ್ಯರಾದ ರಾಮನಗೌಡ ಪಾಟೀಲ, ಸೋಮನಗೌಡ ಸೋಮನಗೌಡ್ರ, ಹನಮಂತಪ್ಪ ಚಿಗರಿ, ದೀಪ್ತಿ ಪಾಠಕ, ಸುಜಾತಾ ಗುಡಿಮನಿ, ವಿದ್ಯಾ ಹುಲಬನ್ನಿ, ಗಂಗವ್ವ ನರ್ತಿ, ಅನ್ನಪೂರ್ಣ ಅಡ್ನೂರ, ಮಂಜುನಾಥ ಮಾನೇದ, ಭೀಮಪ್ಪ ಮಾಲಗಿತ್ತಿ, ಶರಣಬಸಪ್ಪ ಹೊನ್ನಪ್ಪನವರ, ಶಿವಕುಮಾರ ಮುಧೋಳ, ಪ್ರವೀಣ ಶಿವಶಿಂಪಿಗೇರ, ವೀರೇಶ ಮಾಡಲಗೇರಿ, ಲೋಹಿತ ಗುಳಗಣ್ಣವರ, ಗಿರೀಶ್ ಇಟಗಿ ಉಪಸ್ಥಿತರಿದ್ದರು.

ಭಕ್ತಿ ಸೇವೆಯನ್ನು ನಿವೃತ್ತ ಪ್ರಾಚಾರ್ಯ ಎಸ್.ಆರ್. ಅಂಗಡಿ ವಹಿಸಿಕೊಂಡಿದ್ದರು. ರತ್ನಾ ಮಂಟೂರಮಠ, ಮೋಹನ ಮೇರವಾಡೆ, ಶಿವಶಂಕರ ದೊಡ್ಡಮನಿ ಅವರಿಂದ ಸಂಗೀತ ಜರುಗಿತು, ಶಿವಯೋಗಯ್ಯ ಹಿರೇಮಠ ಹಾಗೂ ಮಂಜುಳಾ ಅಕ್ಕಿ ನಿರೂಪಿಸಿ ವಂದಿಸಿದರು.

ಜ್ಞಾನಿಗಳ, ಅನುಭಾವಿಗಳ ಸಜ್ಜನರ ಸಂಘವು ನಮ್ಮಲ್ಲಿ ಜ್ಞಾನವನ್ನುಂಟುಮಾಡುತ್ತವೆ. ಮಂಗಲ ಎಂದರೆ ಶುಭವನ್ನುಂಟು ಮಾಡುವದು. ಪುರಾಣ ಮಂಗಲವು ಪುರಾಣವನ್ನು ಕೇಳಿ, ತಿಳಿದು ಅರ್ಥೈಸಿ ಮನವನ್ನು ನಿರ್ಮಲಗೊಳಿಸಿ ಜೀವನದಲ್ಲಿ ಶುಭವನ್ನು ತಂದುಕೊಳ್ಳುವದಾಗಿದೆ. ಪುರಾಣ ಪುಣ್ಯ ಕತೆಗಳು ಸದ್ಭಾವನೆಗಳನ್ನು ಉಂಟು ಮಾಡಿ ಮನಸ್ಸಿನಲ್ಲಿ ಭಕ್ತಿಯನ್ನು ಬೆಳೆಸುತ್ತವೆ ಎಂದು ಡಾ. ಶಿವಕುಮಾರ ಮಹಾಸ್ವಾಮಿಗಳು ತಿಳಿಸಿದರು.

# ಗಾಜಾದಲ್ಲಿ ಇಸ್ರೇಲ್ ದಾಳಿ: ನಾಲ್ವರು ಪತ್ರಕರ್ತರು ಸೇರಿ 15 ಜನರ ಸಾವು

■ ವಿಜಯಸಾಕ್ಷಿ ಸುದ್ದಿ, ದಕ್ಷಿಣ ಗಾಜಾ

ದಕ್ಷಿಣ ಗಾಜಾ ಪಟ್ಟಿಯ ಖಾನ್ ಯೂನಿಸ್ ನಗರದಲ್ಲಿರುವ ನಾಸರ್ ಆಸ್ಪತ್ರೆಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 15 ಜನರು ಸಾವನ್ನಪ್ಪಿದ್ದಾರೆ. ಸಾವನ್ನಪ್ಪಿದವರಲ್ಲಿ ಅಂತರರಾಷ್ಟ್ರೀಯ ಸುದ್ದಿ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿದ್ದ ನಾಲ್ವರು ಪತ್ರಕರ್ತರು ಸೇರಿದ್ದಾರೆ ಎಂದು ಗಾಜಾದ ಹಮಾಸ್ ನಡೆಸುತ್ತಿರುವ ನಾಗರಿಕ ರಕ್ಷಣಾ ಇಲಾಖೆ ವರದಿ ಮಾಡಿದೆ. ಈ ಘಟನೆಯು ವಿಶ್ವದಾದ್ಯಂತ ತೀವ್ರ ಕಳವಳ ಮತ್ತು ಖಂಡನೆಗೆ ಕಾರಣವಾಗಿದೆ.

ಘಟನೆಯ ವಿವರಗಳು: ದಾಳಿಯು ಎರಡು ಹಂತಗಳಲ್ಲಿ ನಡೆದಿದೆ. ಮೊದಲ ದಾಳಿಯಲ್ಲಿ ಅನೇಕರು ಸಾವನ್ನಪ್ಪಿದ್ದಾರೆ. ರಕ್ಷಣಾ ಸಿಬ್ಬಂದಿ ಮತ್ತು ಪತ್ರಕರ್ತರು ಘಟನಾ ಸ್ಥಳಕ್ಕೆ ತೆರಳಿ ವರದಿ ಮಾಡುತ್ತಿದ್ದಾಗ, ಎರಡನೇ ದಾಳಿ ಸಂಭವಿಸಿತು. ಈ ಎರಡನೇ ದಾಳಿಯಲ್ಲಿ ರಕ್ಷಣಾ ಸಿಬ್ಬಂದಿ, ವೈದ್ಯಕೀಯ ಸಿಬ್ಬಂದಿ, ಮತ್ತು ಪತ್ರಕರ್ತರು ಸೇರಿದಂತೆ ಹೆಚ್ಚಿನ ಜನರು ಸಾವನ್ನಪ್ಪಿದ್ದಾರೆ.

ದಾಳಿಯ ನಂತರ ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಿಕೊಂಡ ವೀಡಿಯೊಗಳು ಪರಿಸ್ಥಿತಿಯ ಗಂಭೀರತೆಯನ್ನು ಎತ್ತಿ ಹಿಡಿಯುತ್ತವೆ.

# ಪ್ರಧಾನಿ ಮೋದಿ ಪದವಿ ವಿವರ ಬಹಿರಂಗಪಡಿಸುವ ಆದೇಶ ರದ್ದುಗೊಳಿಸಿದ ದೆಹಲಿ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಅವರ ಪದವಿಗೆ ಸಂಬಂಧಿಸಿದ ಮಾಹಿತಿಯನ್ನು ಬಹಿರಂಗಪಡಿಸಬೇಕೆಂಬ ಕೇಂದ್ರ ಮಾಹಿತಿ ಆಯೋಗದ (ಸಿಐಸಿ) ಆದೇಶವನ್ನು ದೆಹಲಿ ಹೈಕೋರ್ಟ್ ಸೋಮವಾರ ರದ್ದುಗೊಳಿಸಿದೆ.

ಮೋದಿ ಅವರ ಪದವಿಗೆ ಸಂಬಂಧಿಸಿದ ಮಾಹಿತಿಯನ್ನು ಮಾಹಿತಿ ಹಕ್ಕು (ಆರ್‌ಟಿಐ) ಅರ್ಜಿದಾರರಿಗೆ ಒದಗಿಸುವಂತೆ ವಿಶ್ವವಿದ್ಯಾಲಯಕ್ಕೆ ನಿರ್ದೇಶನ ನೀಡಿದ್ದ ಸಿಐಸಿಯ 2017ರ ಆದೇಶವನ್ನು ಪ್ರಶ್ನಿಸಿ ದೆಹಲಿ ವಿಶ್ವವಿದ್ಯಾಲಯ (ಡಿಯು) ಸಲ್ಲಿಸಿದ್ದ ಮೇಲ್ಮನವಿಗಳನ್ನು ನ್ಯಾಯಮೂರ್ತಿ ಸಚಿನ್ ದತ್ತ ಅವರ ಪೀಠ ಪುರಸ್ಕರಿಸಿದೆ.

"ಸಿಐಸಿ ಆದೇಶವನ್ನು ರದ್ದುಗೊಳಿಸಲಾಗಿದೆ" ಎಂಬುವುದಾಗಿ ಏಕ ಸದಸ್ಯ ನ್ಯಾಯಾಧೀಶರ ಪೀಠ ತೀರ್ಪು ಪ್ರಕಟಿಸುತ್ತಾ ಹೇಳಿದೆ" ಎಂದು ಬಾರ್ & ಬೆಂಚ್ ವರದಿ ಮಾಡಿದೆ.

### ಕೆಜಿಎಂಎಸ್ ಶಾಲೆಯಲ್ಲಿ ನಡೆದ ಅಮೃತ ಭೋಜನ ಮುಕ್ತಾಯ ಸಮಾರಂಭ

# ನಿಮ್ಮ ತಂದೆ-ತಾಯಿಯರನ್ನು ಗೌರವಿಸಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿಮ್ಮ ಹೆತ್ತ-ತಂದೆತಾಯಿಗಳೇ ನಿಮಗೆ ದೇವರು. ಅವರನ್ನು ಎಂದಿಗೂ ಗೌರವಿಸಿ. ಇದರಿಂದ ನಿಮ್ಮ ಬಾಳು ಬಂಗಾರವಾಗುತ್ತದೆ ಎಂದು ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿಯ ಪ್ರವೀಣ ಬಿರಾದಾರ ಹೇಳಿದರು.

ಪಟ್ಟಣದ ಕೆಜಿಎಂಎಸ್ ಶಾಲೆಯಲ್ಲಿ ನಡೆದ ಅಮೃತ ಭೋಜನ ಮುಕ್ತಾಯ ಸಮಾರಂಭದಲ್ಲಿ ಅವರು ಮಾತನಾಡಿದರು.

ನಿತ್ಯವೂ ತಂದೆ-ತಾಯಿಗಳಿಗೆ ನಮಿಸುವದರಿಂದ ನಿಮ್ಮಲ್ಲಿ ಧನಾತ್ಮಕ ಶಕ್ತಿಯ ಸಂಚಯನವಾಗುತ್ತದೆ. ಇದರಿಂದ ನೀವು ಯಾವುದೇ ಕೆಲಸ ಕೈಗೊಂಡರೂ ಅದು ಯಶಸ್ವಿಯಾಗುತ್ತದೆ. ಒಂದು ತಿಂಗಳ ಪರ್ಯಂತ ಸಿಹಿ ಊಟದ ಅಮೃತ ಭೋಜನ ನೀಡಿದ ದಾನಿಗಳಿಗೆ ಮತ್ತು ಶಿಕ್ಷಕರ ಶ್ರಮಕ್ಕೆ ನಮ್ಮ ಹೃತ್ಪೂರ್ವಕ ಧನ್ಯವಾದಗಳು ಎಂದರು.

ತಂದೆ-ತಾಯಿ ಎಂದಿಗೂ ತಮ್ಮ ಮಕ್ಕಳಲ್ಲಿ ತಾರತಮ್ಯ ಮಾಡುವುದಿಲ್ಲ. ಅವರಿಗೆ ಎಲ್ಲ ಮಕ್ಕಳೂ ಒಂದೇ. ತಾಯಿಯನ್ನು ನಿಂದಿಸಿದವರಿಗೆ ಅನಾರೋಗ್ಯ ಕಟ್ಟಿಟ್ಟ ಬುತ್ತಿ. ಈ ಶಾಲೆಯ ಪ್ರಗತಿ ನನಗೆ ಸಂತಸ ನೀಡಿದ್ದು, ಈ ಶಾಲೆಗೆ ನಾನು 3 ಕಂಪ್ಯೂಟರ್‌ಗಳ ಕೊಡುಗೆ ನೀಡುತ್ತೇನೆ ಎಂದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಸಭೆಯನ್ನುದ್ದೇಶಿಸಿ ಮಾತನಾಡಿದರು. ಸಭೆಯಲ್ಲಿ ಅಮೃತ ಭೋಜನದ ದಾನಿಗಳನ್ನು ಸನ್ಮಾನಿಸಲಾಯಿತು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯ ಮೇಲೆ ಸದಸ್ಯ ಗಣಿ ಕುದರಿ, ಬಸವರಾಜ ಚೆನ್ನಿ, ಇಸ್ಮಾಯಿಲ್ ಮುದಗಲ್ಲ, ನಿವೃತ್ತ ಸೈನಿಕ ಎಂ.ಎಸ್. ಮಲ್ಲನಗೌಡ್ರ, ಶಮ್‌ಶಾದ್ ನಶೇಖಾನ, ಕಳಕಪ್ಪ ಮುಗಳಿ, ರಾಘವ ಹುಯಿಲಗೋಳ, ಗಣೇಶ ಬಂಡಿವಡ್ಡರ, ದರ್ಶನ ಗೋಡಿ, ರವಿ ಬಂಡಿವಡ್ಡರ, ಶಾಲಾ ಸಿಬ್ಬಂದಿಯವರು ಇದ್ದರು. ಶಿಕ್ಷಕ ಜೆ.ಎ. ಪಾಟೀಲ ಸ್ವಾಗತಿಸಿದರು. ಶಿಕ್ಷಕಿ ಎನ್.ಎಲ್. ಚವ್ಹಾಣ್ ನಿರೂಪಿಸಿದರು. ಶಿಕ್ಷಕ ಡಿ.ಎಸ್. ಕಳ್ಳಿ ವಂದಿಸಿದರು.

ಹಿರೇಅಳಗುಂಡಿ ಚನ್ನು ಪಾಟೀಲ ಫೌಂಡೇಷನ್‌ದ ಸಂಸ್ಥಾಪಕ ಕಾರ್ಯದರ್ಶಿ ಉಮೇಶ ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ಆಟಪಾಠಗಳೊಂದಿಗೆ ದೇಶ ಪ್ರೇಮವನ್ನು ಬೆಳೆಸಿಕೊಳ್ಳಬೇಕು. ಅದಕ್ಕೆಂದೇ ನಮ್ಮ ಫೌಂಡೇಷನ್‌ನಿಂದ ರಾಷ್ಟ್ರ ಭಕ್ತರ ಪುಸ್ತಿಕೆಗಳನ್ನು ಹಂಚಲಾಗುತ್ತದೆ. ಇವುಗಳನ್ನು ಓದಿ ದೇಶ ಪ್ರೇಮಿಗಳಾಗಿರಿ ಎಂದರು.

# ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳು ಕ್ರೀಡಾಕೂಟದಲ್ಲಿ ಭಾಗವಹಿಸುವುದು ಬಹಳ ಮುಖ್ಯ ಎಂದು ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಯ ಪ್ರಧಾನ ಗುರು ಪಾತೀಮಾ ಖವಾಸ ಹೇಳಿದರು.

ಅವರು ಕ್ರೀಡಾಕೂಟದಲ್ಲಿ ಸಾಧನೆಗೈದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಾತನಾಡಿ, ಮಕ್ಕಳು ನಿತ್ಯ ಚಟುವಟಿಕೆಯಿಂದಿರಲು ಕ್ರೀಡೆಯಲ್ಲಿ ಭಾಗವಹಿಸುವುದು ಮುಖ್ಯವಾಗಿದ್ದು, ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಸಹಕಾರಿಯಾಗುತ್ತದೆ ಎಂದರು.

ಶುಭಂ ಕಬಾಡಿ, ಸುಜನ ನವಲಿ, ಶರೀಫಸಾಬ ಶೇಖ, ನಾಗರಾಜ ಹೊನ್ನಪ್ಪನವರ, ಅಮನ್ ತಹಸೀಲ್ದಾರ, ಗಂಗಾ ಕಟ್ಟಿ, ವೈಷ್ಣವಿ ಕಾವುರೆಡ್ಡಿ, ಅಪ್ಸರಾ ಸದರಭಾವಿ ಈ ವಿದ್ಯಾರ್ಥಿಗಳು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ ಎಂದು ಅಭಿನಂದಿಸಿದರು.

ದೈಹಿಕ ಶಿಕ್ಷಕಿ ಆಸ್ಮಾ ಕಿಂಡ್ರಿ, ಶಿವಲಿಂಗಪ್ಪ ಕೊಂಡಿಕೊಪ್ಪ, ದಾವಲಸಾಬ, ಪೂಜಾ, ಉಮಾ ಬ್ಯಾಳಿ, ನಸರಿನ ಹುನಗುಂದ ಹಾಗೂ ಸಹ ಶಿಕ್ಷಕರು ಇದ್ದರು.

# ಮಾನವನ ಜೀವನಕ್ಕೆ ವಚನಗಳೇ ಮಹಾಮಂತ್ರ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಾನವನ ಜೀವನದ ಸಫಲತೆಗೆ ವಚನಗಳೇ ಮಾಹಾಮಂತ್ರಗಳು. ವಚನಗಳನ್ನು ಕೇವಲ ಕಂಠಪಾಠ ಮಾಡಿದರೆ ಸಾಲದು, ಅವುಗಳ ನೈಜ ಸತ್ಯಗಳನ್ನು ಅರಿಯಬೇಕು ಎಂದು ಡಾ. ಎಸ್.ಸಿ. ಚವಡಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಬಾಲಲೀಲಾ ಮಾಹಾಂತ ಶಿವಯೋಗಿ ಜಾತ್ರಾ ಸಮಿತಿ ವತಿಯಿಂದ ವಚನ ಕಂಠಪಾಠ ಸ್ಪರ್ಧೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

12ನೇ ಶತಮಾನದ ಶರಣ-ಶರಣೆಯರು ಸಾವಿರಾರು ವಚನಗಳನ್ನು ಕೊಟ್ಟಿದ್ದಾರೆ. ವಚನಗಳು ನೈತಿಕ ನೆಲೆಗಟ್ಟಿನ ಮೇಲಿದ್ದು, ಸ್ವಸ್ಥ ಸಮಾಜದ ಪರಿಕಲ್ಪನೆ ಹೊಂದಿವೆ. ಮಕ್ಕಳು ವಚನಗಳನ್ನು ಕಂಠಪಾಠ ಮಾಡುವುದರ ಜೊತೆಯಲ್ಲಿ ವಿದ್ಯಾರ್ಥಿ ಜೀವನದಲ್ಲಿ ಅವುಗಳನ್ನು ಅಳವಡಿಸಿಕೊಳ್ಳಬೇಕು. ಇದರಿಂದ ಸುಂದರ ಸಮಾಜ ನಿರ್ಮಿಸಲು ಸಹಕಾರಿಯಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ ವಹಿಸಿದ್ದರು. ಎಂ.ಎಂ. ಮೇಗಲಮನಿ, ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮಂಜುನಾಥ ಮಟ್ಟಿ, ಕದಳಿ ವೇದಿಕೆ ಅಧ್ಯಕ್ಷೆ ರಾಜೇಶ್ವರಿ ಬಡ್ನಿ, ಶೋಭಾ ಪಾಟೀಲ, ಸುಮನ ಚವಡಿ, ಸುಧಾ ಮಡ್ಡಿಕಾರ, ಈರಪ್ಪ ದೊಟಿಕಲ್ಲ, ಮಹೇಶ ಶಿರಹಟ್ಟಿ, ರವಿ ಡಂಬಳ ಮುಂತಾದವರಿದ್ದರು.

### ಶ್ರಾವಣ ಸಂಜೆ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಶ್ರೀ ವರಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ

# ಮಕ್ಕಳನ್ನು ಸಂಸ್ಕಾರಯುತವಾಗಿ ಬೆಳೆಸಿ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತೆಗ್ಗಿನಮಠದಲ್ಲಿ ನಡೆದ ಶ್ರಾವಣ ಸಂಜೆ ಹಾಗೂ ಧರ್ಮ ಸಮಾರಂಭವು ಸಮಾಜಕ್ಕೆ ಮಾದರಿಯಾಗಿ ಹೊರಹೊಮ್ಮಿದೆ ಎಂದು ತೆಗ್ಗಿನ ಮಠದ ಪೀಠಾಧ್ಯಕ್ಷರಾದ ಶ್ರೀ ವರಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ತೆಗ್ಗಿನಮಠದ ಟಿ.ಎಂ. ಚಂದ್ರಶೇಖರಯ್ಯ ಸಭಾ ಭವನದಲ್ಲಿ ಶುಕ್ರವಾರ ರಾತ್ರಿ ನಡೆದ ಶ್ರಾವಣ ಸಂಜೆ ಕಾರ್ಯಕ್ರಮದ ಸಮಾರೋಪ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶ್ರೀಮಠದಲ್ಲಿ ಕಳೆದ 9 ದಿನಗಳಿಂದ ನಡೆದ ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ನುರಿತ ವ್ಯಕ್ತಿಗಳಿಂದ ವಿವಿಧ ವೈಚಾರಿಕ ವಿಚಾರಗಳು, ಉಪನ್ಯಾಸಗಳನ್ನು ನೀಡುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ಬಾಲ್ಯದಲ್ಲಿಯೇ ಮಹನೀಯರ ಗುಣಗಳನ್ನು ಬಿತ್ತುವ ಮೂಲಕ ಸಂಸ್ಕಾರಯುತವಾಗಿ ಬೆಳೆಸಬೇಕು ಎಂದು ಸಲಹೆ ನೀಡಿದರು. ಹಿಂದುಳಿದ ಹರಪನಹಳ್ಳಿ ತಾಲೂಕಿನಲ್ಲಿ ಶೈಕ್ಷಣಿಕ ಕ್ರಾಂತಿ ಮಾಡಿದ ಕೀರ್ತಿ ಡಾ.ಚಂದ್ರಮೌಳೀಶ್ವ ಶಿವಾಚಾರ್ಯರಿಗೆ ಸಲ್ಲುತ್ತದೆ ಎಂದು ಸ್ಮರಿಸಿದರು.ಬಳ್ಳಾರಿ ಸಹಕಾರ ಸಂಘಗಳ ಉಪ ನಿಬಂಧಕ ಜಿ.ಎಂ. ವೀರಭದ್ರಯ್ಯ ಮಾತನಾಡಿ, ಹಿಂದೂ ಧರ್ಮದ ಪ್ರತೀಕವೇ ಶ್ರಾವಣ ಮಾಸ. ಇಂತಹ ಸಂದರ್ಭದಲ್ಲಿ ಶ್ರೀಮಠವು ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಂಡಿರುವುದು ಶ್ಲಾಘನೀಯ ಎಂದರು. ತೆಗ್ಗಿಮಠ ಶಿಕ್ಷಣ ಮಹಾವಿದ್ಯಾಲಯದ ಡೀನ್ ಟಿ.ಎಂ. ರಾಜಶೇಖರ ಮಾತನಾಡಿ, ಮಠ-ಮಾನ್ಯಗಳು ಧರ್ಮ, ಸಂಸ್ಕೃತಿಯನ್ನು ಉಳಿಸುವ ಮಹತ್ಕಾರ್ಯವನ್ನು ಕೈಗೊಂಡಿವೆ. ನಾವು ಸನಾತನ ಧರ್ಮದ ಉಪದೇಶವನ್ನು ಮಕ್ಕಳಿಗೆ ತಿಳಿಸಬೇಕು ಎಂದು ಹೇಳಿದರು.

ಆಡಿಟರ್ ಅಮೃತ ಮಂಜುನಾಥ ಮಾತನಾಡಿ, ಧರ್ಮ-ಧರ್ಮಗಳ ನಡುವೆ ಗಲಾಟೆ, ಯುದ್ಧ ನಡೆಯುತ್ತಿರುವ ಸಂದರ್ಭದಲ್ಲಿ ಧರ್ಮ ಜಾಗೃತಿ ಮೂಡಿಸುತ್ತಿರುವ ತೆಗ್ಗಿನಮಠದ ಕಾರ್ಯ ಶ್ಲಾಘನೀಯ ಎಂದರು. ರಾಮಘಟ್ಟ ಪುರವರ್ಗಮಠದ ರಾಜಗುರು ರೇವಣಸಿದ್ದೇಶ್ವರ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ದತ್ತಾತ್ರೇಯ ಪೀಸೆ ಅವರು ನವಜಾತ ಶಿಶುಗಳ ನಿತ್ಯ ಆರೈಕೆ ಮತ್ತು ಆರೋಗ್ಯದ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದ ನಿರೂಪಣೆಯನ್ನು ನಿವೃತ್ತ ಮುಖ್ಯ ಶಿಕ್ಷಕ ಸಿ.ಎಂ. ಕೊಟ್ರಯ್ಯ ನೆರವೇರಿಸಿದರು. ಈ ಸಂದರ್ಭದಲ್ಲಿ ತೆಗ್ಗಿನಮಠದ ಜ್ಞಾನಗಂಗೋತ್ರಿ ಮಹವಿದ್ಯಾಲಯದ ಆಡಳಿತಾಧಿಕಾರಿ ಟಿ.ಎಂ. ಪ್ರತೀಕ್, ವರ್ತಕ ಪಿ.ಕೆ. ಎಂ. ನಾಗಲಿಂಗಯ್ಯ, ವಿದ್ಯುತ್ ಗುತ್ತಿಗೆದಾರರ ಎ.ಕರಿಬಸವರಾಜ, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ತಳವಾರ ಚಂದ್ರಪ್ಪ, ತಾಲೂಕು ಸಹಕಾರ ಸಂಘಗಳ ಸಹಾಯಕ ನಿಬಂಧಕ ಶರಣಬಸಪ್ಪ, ಹಿರಿಯ ಪತ್ರಕರ್ತ ಬಿ.ರಾಮಪ್ರಸಾದ ಗಾಂಧಿ, ಉಪನ್ಯಾಸಕ ರಾಮಶಾಸ್ತ್ರೀ, ಸಂಸ್ಕಾರ ಭಾರತಿ ಟ್ರಸ್ಟ್‌ನ ಅಧ್ಯಕ್ಷ ಮಹಾವೀರ ಭಂಡಾರಿ, ದೇವೇಶ, ಶಿಕ್ಷಕಿ ಸಂಗೀತ ಮಂಜುನಾಥ, ಪ್ರಾಚಾರ್ಯ ಅರುಣಕುಮಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ತೆಗ್ಗಿನಮಠದ ಕಾರ್ಯದರ್ಶಿ ಡಾ. ಟಿ.ಎಂ. ಚಂದ್ರಶೇಖರಯ್ಯ ಮಾತನಾಡಿ, ಶ್ರೀಮಠದಲ್ಲಿ ನಡೆದ ಶ್ರಾವಣ ಸಂಜೆ ಕಾರ್ಯಕ್ರಮದಲ್ಲಿ ಸಮಾಜಮುಖಿಯಾಗಿ ಸೇವೆ ಸಲ್ಲಿಸಿದ ಹಲವು ಸಾಧಕರನ್ನು ಸನ್ಮಾನಿಸಿ ಪ್ರೋತ್ಸಾಹಿಸುವ ಮೂಲಕ ಅವರಿಗೆ ಮತ್ತಷ್ಟು ಸೇವೆ ಮಾಡಲು ಉತ್ತೇಜನ ನೀಡಲಾಗಿದೆ ಎಂದರು.

# ಉಚಿತ ವೃತ್ತಿ ತರಬೇತಿಗಳು ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಬಿ.ಆಯ್-ಎ.ಎಸ್.ಎಫ್ಆರ್‌ಸೆಟಿ ಹುಲಕೋಟಿ ಗದಗ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ಹುಲಕೋಟಿ ಗದಗ ಸಂಸ್ಥೆಯಲ್ಲಿ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ/ಯುವತಿಯರಿಗೆ ಸುಮಾರು 20 ವರ್ಷಗಳಿಂದ ವಿವಿಧ ರೀತಿ ಸ್ವಯಂ ಉದ್ಯೋಗ ತರಬೇತಿಯನ್ನು ನೀಡುತ್ತಾ ಬಂದಿದೆ ಮತ್ತು ತರಬೇತಿ ಪಡೆದ ಅಭ್ಯರ್ಥಿಗಳಲ್ಲಿ 70% ತಮ್ಮ ಉದ್ಯೋಗವನ್ನು ಕೈಗೊಂಡಿದ್ದಾರೆ.

ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳಿನಲ್ಲಿ ಕುರಿ ಸಾಕಾಣಿಕೆ, ಅಣಬೆ ತಯಾರಿಕೆ, ಕಂಪ್ಯೂಟರ್ ಟ್ಯಾಲಿ, ಕಂಪ್ಯೂಟರ್ ಡಿ.ಟಿ.ಪಿ, ದ್ವಿ ಚಕ್ರ ವಾಹನ ರಿಪೇರಿ, ಫೋಟೋಗ್ರಫಿ ಮತ್ತು ವಿಡಿಯೋಗ್ರಾಫಿ, ಮಹಿಳೆಯರ ಹೊಲಿಗೆ ತರಬೇತಿ. ಉಚಿತ ತರಬೇತಿಗಳು ಆರಂಭವಾಗುತ್ತವೆ.

ಆಸಕ್ತ 18-44 ರ ವಯಸ್ಸಿನೊಳಗಿನ ಗಂಡು ಅಥವಾ ಹೆಣ್ಣು ಗ್ರಾಮೀಣ ಪ್ರದೇಶದ ಬಿ.ಪಿ.ಎಲ್, ಆದ್ಯತಾ ಕುಟುಂಬ, ಪಿ.ಎಚ್.ಎಚ್, ಅಥವಾ ನರೇಗಾ ಜಾಬ್ ಕಾರ್ಡ್ ಹೊಂದಿರುವವರು ಈ ತರಬೇತಿಗಳನ್ನು ಪಡೆದುಕೊಳ್ಳಬಹುದು.

ತರಬೇತಿಗಳಲ್ಲಿ ಉಚಿತ ಊಟ ಮತ್ತು ವಸತಿ ಇರುತ್ತದೆ. ತರಬೇತಿ ಪಡೆದವರಿಗೆ ಕೇಂದ್ರ ಸರಕಾರದಿಂದ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಸಾಲಕ್ಕೆ ಸಹಾಯ ಮಾಡಿಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವಿಳಾಸ- ಎಸ್.ಬಿ.ಆಯ್-ಎ.ಎಸ್.ಎಫ್ಆರ್‌ಸೆಟಿ ಹುಲಕೋಟಿ ಗದಗ ಕೆ.ವಿ.ಕೆ ಆವರಣ ಹುಲಕೋಟಿ. ಜಿ.ಗದಗ. ಮೊ. 8880169996, 9632287949 ಇಲ್ಲಿ ಸಂಪರ್ಕಿಸಬಹುದಾಗಿದೆ.

### ಸರ್ವ ಧರ್ಮಗಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶ್ರೀ ಕಲ್ಲಯ್ಯಜ್ಜನವರು

# ಪತಿ-ಪತ್ನಿ ಅರಿತು ನಡೆದರೆ ಬಾಳು ಬಂಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ಸಮಾಜದಲ್ಲಿ ಪತಿ-ಪತ್ನಿ ಒಬ್ಬರಿಗೊಬ್ಬರು ಅರಿತು ನಡೆದರೆ ಅವರ ಬಾಳು ಬಂಗಾರವಾಗುತ್ತದೆ ಎಂದು ನಗರದ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಶ್ರೀ ಕಲ್ಲಯ್ಯಜ್ಜನವರು ಹೇಳಿದರು.

ತಾಲೂಕಿನ ನಾಗಾವಿ ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರ ಪುರಾಣ ಕಾರ್ಯಕ್ರಮ ಮಂಗಲೋತ್ಸವದಲ್ಲಿ ಜರುಗಿದ ಸರ್ವ ಧರ್ಮಗಳ ಸಾಮೂಹಿಕ ವಿವಾಹ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.



ವೀರೇಶ್ವರ ಪುಣ್ಯಾಶ್ರಮದ ಹಿಂದಿನ ಗುರುಗಳಾದ ಪಂ. ಪುಟ್ಟರಾಜ ಕವಿ ಗವಾಯಿಗಳವರ ಕಾಲದಿಂದಲೂ ನಾಗಾವಿ ಗ್ರಾಮವನ್ನು ತಮ್ಮ ತವರುಮನೆ ಎಂದೇ ಭಾವಿಸಿ ಪ್ರತಿವರ್ಷ ಗ್ರಾಮದ ಜನತೆಗೆ ದರ್ಶನಾಶೀರ್ವಾದವನ್ನು ನೀಡುತ್ತಿದ್ದರು. ಅದೇ ಪರಂಪರೆಯನ್ನು ಮುಂದುವರೆಸಿಕೊಂಡು ತಮ್ಮನ್ನು ನಾಗಾವಿ ಗ್ರಾಮಕ್ಕೆ ಆಹ್ವಾನಿಸುತ್ತಿರುವುದು ಸಂತಸದ ವಿಷಯ. ಮುಸ್ಲಿಂ ಸಮಾಜದ ಪೀರಸಾಬ ದಾವಲಸಾಬ ಪೀರಖಾನವರ ಅವರು ತಮಗೆ ತುಲಾಭಾರ ನೆರವೇರಿಸುವ ಮೂಲಕ ಭಾವೈಕ್ಯತೆಗೆ ಶ್ರೀಕಾರ ಹಾಕಿದ್ದಾರೆ ಎಂದು ಕಲ್ಲಯ್ಯಜ್ಜನವರು ಹೇಳಿದರು.

ಸರ್ವಧರ್ಮದ ನವ ವಧು-ವರರಿಗೆ ಕಲ್ಲಯ್ಯಜ್ಜನವರು ಸೇರಿದಂತೆ ಗ್ರಾಮದ ಗುರು-ಹಿರಿಯರು, ಗಣ್ಯರು ಶುಭ ಹಾರೈಸಿದರು.

ಶರಣಬಸವೇಶ್ವರ ಪುರಾಣ ಪಠಣವನ್ನು ಗ್ರಾಮದ ಗಂಗಾಧರೇಶ್ವರ ಮಠದ ವೇದಮೂರ್ತಿ ಮೃತ್ಯುಂಜಯಸ್ವಾಮಿ ಹಿರೇಮಠ, ಪುರಾಣ ಪ್ರವಚನವನ್ನು ವೇದಮೂರ್ತಿ ಮಂಜಯ್ಯಸ್ವಾಮಿ ಹಿರೇಹಾಳ ನೆರವೇರಿಸಿದರು. ಸಂಗೀತ ಸೇವೆಯನ್ನು ನೀಡಿದ ಬಿ.ಎಸ್. ಹೊಂಬಳ ಹಾಗೂ ರಾಜಶೇಖರ ಸಂಗಳಕರ ಕನ್ನೂರ, ಬಸವಣ್ಣ ದೇವರಿಗೆ ನಿತ್ಯ ಅಭಿಷೇಕ ಸೇವೆಗೈದ ಸಂತೋಷಸ್ವಾಮಿ ಹಿರೇಮಠ, ತುಲಾಭಾರ ಸೇವೆಗೈದ ಪೀರಖಾನವರ ಕುಟುಂಬದವರನ್ನು ಕಲ್ಲಯ್ಯಜ್ಜನವರು ಸನ್ಮಾನಿಸಿದರು.

ಶರಣಬಸವೇಶ್ವರ ಪುರಾಣ ಸಮಿತಿ, ಬಸವೇಶ್ವರ ಭಜನಾ ಸಂಘ, ಗಂಗಾಧರೇಶ್ವರ ಯುವಕ ಮಂಡಳ, ಗ್ರಾಮದ ಸರ್ವ ಸದ್ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಮಲ್ಲಪ್ಪ ಗೋಲಪ್ಪನವರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಸದ್ಭಕ್ತರಿಗೆ ಮಹಾದಾಸೋಹ ಜರುಗಿತು. ಸಾಯಂಕಾಲ ಗ್ರಾಮದ ಸದ್ಭಕ್ತರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ರಥೋತ್ಸವವು ಸಡಗರ, ಸಂಭ್ರಮದಿಂದ ಜರುಗಿತು.

ಪುರಾಣ ಸಮಿತಿ ಮುಖ್ಯಸ್ಥರಾದ ತಾ.ಪಂ ಮಾಜಿ ಅಧ್ಯಕ್ಷ ಬಸವಣ್ಣೆಪ್ಪ ಚಿಂಚಲಿ ಮಾತನಾಡಿ, ಜಾತಿ, ಪಂಥಗಳ ಬೇಧಭಾವವಿಲ್ಲದೇ ಇಡೀ ಗ್ರಾಮದ ಸದ್ಭಕ್ತರು ಒಂದುಗೂಡಿ, ಕಳೆದ 44 ವರ್ಷಗಳಿಂದ ಕಲಬುರ್ಗಿ ಶರಣಬಸವೇಶ್ವರ ಪುರಾಣ ಹಾಗೂ 14 ವರ್ಷಗಳಿಂದ ಜಾತ್ರಾ ಮಹೋತ್ಸವ ನಡೆಸಿಕೊಂಡು ಬರಲಾಗುತ್ತಿದೆ.

ಇಂತಹ ಆಧ್ಯಾತ್ಮಿಕ ಚಿಂತನೆಯ ಕಾರ್ಯಕ್ರಮಗಳಿಂದ ಗ್ರಾಮದ ಸದ್ಭಕ್ತರು, ರೈತರು, ಯುವಕರು, ಮಹಿಳೆಯರಿಗೆ ಸದುಪಯೋಗವಾಗುತ್ತಿವೆ ಎಂದು ಹೇಳಿದರು.

# ಬೆನಕನ ಅಮವಾಸ್ಯೆ ನಿಮಿತ್ತ ಪಾಲಕಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಹೊಸಪೇಟ ಚೌಕದ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಬೆನಕನ ಅಮವಾಸ್ಯೆ ನಿಮಿತ್ತ ಪಾಲಕಿ ಉತ್ಸವ ಭಕ್ತಿ ಸೇವಾ ಕೈಂಕರ್ಯ ಜರುಗಿತು. ಬೆಟಗೇರಿ ಕಾಳಿಕಾ ದೇವಸ್ಥಾನ ಟ್ರಸ್ಟ್ ಕಮಿಟಿಯ ನಿರ್ದೇಶಕರು, ಗದಗ ಜಿಲ್ಲಾ ವಿಶ್ವಕರ್ಮ ಯುವ ಮುಖಂಡ ಮಹೇಶ ಬಡಿಗೇರ ಕುಟುಂಬ ವರ್ಗದವರು ಮತ್ತು ಅಭಿಯಂತರರಾದ ರಮೇಶ ವೀರಪ್ಪ ಆಚಾರ ದಂಪತಿಗಳು ಬೆನಕನ ಅಮವಾಸ್ಯೆಯ ಪಾಲಕಿ ಉತ್ಸವ ಭಕ್ತಿ ಸೇವೆ ವಹಿಸಿದ್ದರು.



ಟ್ರಸ್ಟ್‌ನ ಪದಾಧಿಕಾರಿಗಳಾದ ಶ್ರೀಧರ ಕೊಣ್ಣೂರ, ನಾಗಲಿಂಗಪ್ಪ ಪತ್ತಾರ, ಎನ್.ಬಿ. ಕೊಣ್ಣೂರ, ಅಶೋಕ ಸುತಾರ, ಸದಸ್ಯರಾದ ರಾಘವೇಂದ್ರ ಬಡಿಗೇರ, ವಿಜಯಕುಮಾರ ಬೆಂತೂರ, ರವಿ ಬಡಿಗೇರ, ಸತೀಶ ಹೊರಪೇಟ, ಮನೋಜ ಬೆಂತೂರ ಕಾಳಿಕಾ ಸ್ತುತಿ ಪಠಣ ಮಾಡಿದರು.

ಗಣೇಶ ಚತುರ್ಥಿ ಹಬ್ಬದ ಕುರಿತು ಸರಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಮಂಜುನಾಥ ಅಕ್ಕಸಾಲಿ ವಿಶೇಷ ಉಪನ್ಯಾಸ ನೀಡಿ, ಬೆನಕನ ಅಮವಾಸ್ಯೆಯ ವಿಶೇಷತೆ, ಗಣೇಶ ಉತ್ಸವ ಆಚರಣೆಗಳ ಕುರಿತು ತಿಳಿಸಿದರು.

ಪ್ರಸಕ್ತ ವರ್ಷದ ಶರನ್ನವರಾತ್ರಿ ಉತ್ಸವ ಆಚರಣೆ ಕುರಿತು ಚರ್ಚೆ ಮಾಡಲಾಯಿತು. ಶ್ರೀ ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಅರ್ಚಕ ಸುರೇಶ ಬಡಿಗೇರ ಮತ್ತು ಸುದ್ದಿವಾಹಿನಿ ವರದಿಗಾರ ಭೀಮನಗೌಡ ಪಾಟೀಲ, ರಮೇಶ ಬಡಿಗೇರ, ಭಾಸ್ಕರ ಕಮ್ಮಾರ, ಮಂಜುನಾಥ ಬಡಿಗೇರ, ಗಾಯಿತ್ರಿ ಮಹಿಳಾ ಮಂಡಳದ ಗೌರವಾಧ್ಯಕ್ಷರಾದ ಶೋಭಾ ಬೆಂತೂರ, ಅಧ್ಯಕ್ಷರಾದ ಭಾರತಿ ಹೊರಪೇಟ, ಪ್ರಧಾನ ಕಾರ್ಯದರ್ಶಿ ಜ್ಯೋತಿ ಬಡಿಗೇರ, ಸಹ ಕಾರ್ಯದರ್ಶಿ ವಿಜಯಲಕ್ಷ್ಮೀ ಕೊಣ್ಣೂರ, ಹಿರಿಯರಾದ ಲಕ್ಷ್ಮೀ ಕೊಣ್ಣೂರ, ಮಂಜುಳಾ ಅನಂತಪುರ, ಲಕ್ಷ್ಮೀ ಬಡಿಗೇರ, ಲತಾ ಬಡಿಗೇರ ಮುಂತಾದವರಿದ್ದರು.

ಪಾಲಕಿ ಉತ್ಸವ ಭಕ್ತಿ ಸೇವಾ ಕೈಂಕರ್ಯ ವಹಿಸಿಕೊಂಡ ಮಹೇಶ ಬಡಿಗೇರ ಮತ್ತು ರಮೇಶ ಪತ್ತಾರರನ್ನು ಸನ್ಮಾನಿಸಲಾಯಿತು. ಸಾಕ್ಷಿ ಹುಯಿಲಗೋಳ ಪ್ರಾರ್ಥಿಸಿದರು. ಐಶ್ವರ್ಯ ಶ್ರೀಧರ ಕೊಣ್ಣೂರ ಸ್ವಾಗತಿಸಿದರು. ಪ್ರಾಸ್ತಾವಿಕವಾಗಿ ಶಿಕ್ಷಕ ವಿಶ್ವನಾಥ ಕಮ್ಮಾರ ಮಾತನಾಡಿದರು. ನಿಖಿತಾ ಅಶೋಕ ಸುತಾರ ನಿರೂಪಿಸಿದರು. ಮನೋಜ ಬೆಂತೂರ ವಂದಿಸಿದರು.

# ಸೆ.1ರಂದು ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭೀ) ಕಾರ್ಯಕ್ರಮದಡಿಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಗುತ್ತಿಗೆ ಆಧಾರದ ಮೇಲೆ ನ್ಯೂರಾಲಾಜಿಸ್ಟ್ / ಫಿಜಿಷಿಯನ್ / ವೈದ್ಯಕೀಯ ಅಧಿಕಾರಿ-01, ಫಿಜಿಯೋಥೆರಪಿಸ್ಟ್-01, ಸ್ಪೀಚ್ ಥೆರಪಿಸ್ಟ್-01, ಕ್ಲಿನಿಕಲ್ ಸೈಕಾಲಾಜಿಸ್ಟ್ -01, ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ಭರ್ತಿ ಮಾಡಲು ಸೆಪ್ಟೆಂಬರ್ 1 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕೊಠಡಿ ಸಂಖ್ಯೆ -101, ಜಿಲ್ಲಾಡಳಿತ ಭವನ ಗದಗದಲ್ಲಿ ನೇರ ಸಂದರ್ಶನ ಕರೆಯಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://gadag.nic.in ಲ್ಲಿ ವೀಕ್ಷಿಸಬಹುದು ಎಂದು ಜಿಲ್ಲಾ ಕುಷ್ಠ ರೋಗ ನಿರ್ಮೂಲನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ನಾತಕೋತ್ತರ ಪದವಿ ಪ್ರವೇಶಕ್ಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸ್ನಾತಕೋತ್ತರ ಪದವಿ (M.A. in Journalism and Mass Communication) ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ್ದ ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 7, 2025 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಪ್ರವೇಶ ಪರೀಕ್ಷೆಯನ್ನು ಸೆಪ್ಟೆಂಬರ್ 9, 2025 ರಂದು ಮಧ್ಯಾಹ್ನ 12:15 ರಿಂದ 1:30 ರವರೆಗೆ ವಿಭಾಗದಲ್ಲಿ ನಡೆಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ. ಕಳೆದ 40 ವರ್ಷಗಳಿಂದ ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗವು ಮಾಧ್ಯಮ ಕ್ಷೇತ್ರದಲ್ಲಿ ವೃತ್ತಿಪರರನ್ನು ರೂಪಿಸುತ್ತಿದೆ. ಅತ್ಯಾಧುನಿಕ ಸ್ಟುಡಿಯೋ ತಂತ್ರಜ್ಞಾನದೊಂದಿಗೆ ನೂತನ ಪಠ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದ್ದು, ಮುದ್ರಣ, ವಿದ್ಯುನ್ಮಾನ, ಮತ್ತು ಡಿಜಿಟಲ್ ಮಾಧ್ಯಮಗಳ ಜೊತೆಗೆ ಸಾರ್ವಜನಿಕ ಸಂಪರ್ಕ, ಜಾಹಿರಾತು, ಟೆಕ್ನಿಕಲ್ ಕಂಟೆಂಟ್ ರೈಟಿಂಗ್, ಸಿನಿಮಾ, ಮತ್ತು ಧಾರಾವಾಹಿ ನಿರ್ಮಾಣದಂತಹ ವಿಷಯಗಳಲ್ಲಿ ವಿದ್ಯಾರ್ಥಿಗಳ ಆಸಕ್ತಿಗೆ ತಕ್ಕಂತೆ ತರಬೇತಿ ನೀಡಲಾಗುತ್ತಿದೆ. ವಿಭಾಗದ ಹಳೆಯ ವಿದ್ಯಾರ್ಥಿಗಳು ಮತ್ತು ನುರಿತ ತರಬೇತುದಾರರಿಂದ ವಿದ್ಯಾರ್ಥಿ ಕೇಂದ್ರಿತ ಶಿಕ್ಷಣವನ್ನು ಒದಗಿಸಲಾಗುತ್ತಿದೆ.

ಈ ವಿಭಾಗವು ಇದುವರೆಗೆ 500ಕ್ಕೂ ಹೆಚ್ಚು ಪತ್ರಕರ್ತರನ್ನು ರೂಪಿಸಿದ್ದು, ಇವರು ರಾಜ್ಯ ಮತ್ತು ದೇಶದ ಮಹಾನಗರಗಳಲ್ಲಿ ಪತ್ರಿಕೆ, ರೇಡಿಯೊ, ಟೆಲಿವಿಷನ್, ಡಿಜಿಟಲ್ ಮಾಧ್ಯಮ, ಸಾರ್ವಜನಿಕ ಸಂಪರ್ಕ, ಜಾಹೀರಾತು, ಸಿನಿಮಾ, ಮತ್ತು ಮನರಂಜನಾ ಉದ್ಯಮದಲ್ಲಿ ಪ್ರಮುಖ ಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಸೃಜನಾತ್ಮಕ ಬರವಣಿಗೆಯಲ್ಲಿ ಆಸಕ್ತಿ ಹೊಂದಿರುವವರಿಗೆ ಈ ಕೋರ್ಸ್ ಒಂದು ಉತ್ತಮ ಅವಕಾಶವಾಗಿದೆ.

ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗವು ಆಕಾಂಕ್ಷಿಗಳಿಗೆ ಉನ್ನತ ತರಬೇತಿ ಸಂಸ್ಥೆಯಾಗಿ ಗುರುತಿಸಲ್ಪಟ್ಟಿದೆ. ಈ ಕೋರ್ಸ್‌ಗೆ ಪ್ರವೇಶ ಪಡೆಯಲು ಇಚ್ಛಿಸುವವರು ಹೆಚ್ಚಿನ ಮಾಹಿತಿಗಾಗಿ ವಿಭಾಗದ ಮುಖ್ಯಸ್ಥ ಡಾ. ಸಂಜಕುಮಾರ ಮಾಲಗತ್ತಿಯವರನ್ನು ಮೊಬೈಲ್ ಸಂಖ್ಯೆ 94810 13993 ರಲ್ಲಿ ಸಂಪರ್ಕಿಸಬಹುದು.

# ಕ್ರೀಡೆಗಳಿಂದ ದೈಹಿಕ, ಮಾನಸಿಕ ಸಾಮರ್ಥ್ಯ ವೃದ್ಧಿ




■ವಿಜಯಸಾಕ್ಷಿ ಸುದ್ದಿ, ಗದಗ

ಕ್ರೀಡಾ ಚಟುವಟಿಕೆಗಳು ಪ್ರತಿಯೊಬ್ಬ ವ್ಯಕ್ತಿಯ ದೈಹಿಕ, ಮಾನಸಿಕ ಬೆಳವಣಿಗೆಗೆ ಸಹಾಯಕಾರಿಯಾಗುತ್ತದೆ. ಹೀಗಾಗಿ ಎಲ್ಲ ವಿದ್ಯಾರ್ಥಿಗಳು ಹಾಗೂ ಯುವಕರು ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸಲು ಆಸಕ್ತಿ ಬೆಳೆಸಿಕೊಳ್ಳಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಕರೆ ನೀಡಿದರು.

ಸಂಕನೂರ ಗ್ರುಪ್ ಆಫ್ ಇನ್‌ಸ್ಟಿಟ್ಯೂಷನ್ ಹಾಗೂ ಲಾನ್ ಟೆನ್ನಿಸ್ ಅಸೋಸಿಯೇಷನ್ ಇವುಗಳ ಸಂಯುಕ್ತ ಆಶ್ರಯದಲ್ಲಿ 79ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಸಂಕನೂರ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ನಲ್ಲಿ ಏರ್ಪಡಿಸಿದ್ದ ಟೆನ್ನಿಸ್ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಎನ್.ಸಿ.ಸಿ ಅಧಿಕಾರಿ ಭುವನ ಖರೆ ಮಾತನಾಡಿ, ಸಂಕನೂರ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ನವರು ಅತ್ಯುತ್ತಮವಾದ ಲಾನ್ ಟೆನ್ನಿಸ್ ಕ್ರೀಡಾಂಗಣ ನಿರ್ಮಿಸಿದ್ದು, ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಹೇಳಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕುಮಾರ ಕೆಂಚಪ್ಪನವರ ಸಂದರ್ಭೋಚಿತವಾಗಿ ಮಾತನಾಡಿದರು. ಗದಗ-ಬೆಟಗೇರಿಯ ಹಿರಿಯ ಲಾನ್ ಟೆನ್ನಿಸ್ ಕ್ರೀಡಾಪಟುಗಳಾದ ಡಾ. ಜೆ.ಸಿ. ಶಿರೋಳ ಮತ್ತು ನಿವೃತ್ತ ಪ್ರಾಧ್ಯಾಪಕರು ಗಂಗಾಧರ ಥಡಿ ಅವರನ್ನು ಸನ್ಮಾನಿಸಲಾಯಿತು. ಕ್ರೀಡಾಕೂಟದಲ್ಲಿ ರಘು ಮೇರವಾಡೆ ಅವರ ತಂಡವು ಗೆಲವು ಸಾಧಿಸಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಪ್ರಕಾಶ ಸಂಕನೂರ ವಹಿಸಿದ್ದರು. ಡಿ.ವೈ.ಎಸ್.ಪಿ ವಿದ್ಯಾನಂದ ನಾಯಕ, ಡಾ. ಗುರುಪ್ರಸಾದ, ಡಾ. ಶ್ರೀಧರ ಕುರಡಗಿ, ಡಾ. ಆದಿತ್ಯ ಗೋಡಖಿಂಡಿ, ಡಾ. ಸಿದ್ಧಾರ್ಥ, ಡಾ. ಹನಮಂತ ಮಾಲಿ, ಡಾ. ಶಶಾಂಕ ಶಿರೋಳ, ಡಾ. ರಾಹುಲ ಶಿರೋಳ, ಡಾ. ಇಂದುಶೇಖರ ಬಳ್ಳಾರಿ, ಡಾ. ವಿರೇಶ ವಿಜಾಪೂರ, ಕ್ರೀಡಾ ತರಬೇತುದಾರ ಶ್ರೀನಿವಾಸ ಬದಿ ಉಪಸ್ಥಿತರಿದ್ದರು. ಉಪ ಪ್ರಾಚಾರ್ಯರಾದ ವಿನ್ಸೆಂಟ್ ಪಾಟೀಲ ಸ್ವಾಗತಿಸಿದರು, ಡಾ. ಪವನ ಪಾಟೀಲ ವಂದಿಸಿದರು.

# ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸುದರ್ಶನ ಚಕ್ರ ಯುವ ಮಂಡಳಿ ಗದಗ ಜಿಲ್ಲಾ ಹಿಂದೂ ಮಹಾ ಗಣಪತಿ ವತಿಯಿಂದ ಆ. 27ರ ಬುಧವಾರ ಸಂಜೆ 4 ಗಂಟೆಗೆ ಶ್ರೀ ಸಿದ್ಧಿವಿನಾಯಕ ಹಾಗೂ ದೊಡ್ಡ ಗಣಪತಿಯ ಬೆಳ್ಳಿ ಆಭರಣಗಳ ಮೆರವಣಿಗೆ ಆಯೋಜಿಸಲಾಗಿದೆ. ನಂತರ ಸಾಯಂಕಾಲ 6 ಗಂಟೆಗೆ ಕಾಟನ್ ಮಾರ್ಕೆಟ್ ರಸ್ತೆಯ ವೀರಶೈವ ಲೈಬ್ರರಿ ಬಳಿ ಗಜಾನನ ಪ್ರತಿಷ್ಠಾಪನೆ ಕಾರ್ಯಕ್ರಮ ಜರುಗಲಿದ್ದು, ಭಕ್ತಾದಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಂಡಳಿಯ ಪ್ರಕಟಣೆ ಕೋರಿದೆ.




ಮುಸ್ಲಿಂ ಸಮುದಾಯದ ಪವಿತ್ರ ಶ್ರದ್ಧಾಕೇಂದ್ರವಾಗಿರುವ ಮಕ್ಕಾ ಮದೀನ ಪುಣ್ಯ ಕ್ಷೇತ್ರಕ್ಕೆ ಗದಗ ಜಿಲ್ಲೆಯ ಶಿರಹಟ್ಟಿಯಿಂದ ಪಾದಯಾತ್ರೆ ಕೈಗೊಂಡ ಶಿರಹಟ್ಟಿ ಪಟ್ಟಣದ ನಿವಾಸಿ ಫಜಲ್‌ಶೇಖ್ ಅವರನ್ನು ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕವು ಸನ್ಮಾನಿಸಿ ಗೌರವಿಸಿತು. ಸುಮಾರು 10 ಸಾವಿರ ಕಿ.ಮೀ ದೂರವನ್ನು 6 ತಿಂಗಳೊಳಗೆ ಪೂರ್ಣಗೊಳಿಸಿದ ಈ ಯಾತ್ರಿಕನಿಗೆ ಗದುಗಿನ ಕನಕ ಭವನದಲ್ಲಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭದಲ್ಲಿ ಧರ್ಮ ಗುರುಗಳ, ಅತಿಥಿಗಳ ಉಪಸ್ಥಿತಿಯಲ್ಲಿ ಸನ್ಮಾನಿಸಲಾಯಿತು.

# ಸಾಧಕರ ಜೀವನ ಚರಿತ್ರೆ ಓದಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿ ಜೀವನದಲ್ಲಿ ಓದುವ ಹಾಗೂ ಬರೆಯುವ ಹವ್ಯಾಸವನ್ನು ಇಟ್ಟುಕೊಳ್ಳಬೇಕು. ಸಾಧಕರ ಜೀವನ ಚರಿತ್ರೆಗಳನ್ನು ಓದುವ ಮೂಲಕ ಸ್ಫೂರ್ತಿ ಪಡೆದುಕೊಳ್ಳಬೇಕು ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಹೇಳಿದರು.

ನರೇಗಲ್ಲ ಪಟ್ಟಣದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ಭಾನುವಾರ ವಿದ್ಯಾರ್ಥಿಗಳ ಕಲಿಕಾ ಪ್ರಗತಿಗಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಬೇಕಾದರೆ ಕನಿಷ್ಠ ಐದು ದಿನಪತ್ರಿಕೆಗಳನ್ನು ಓದುವ ಹಾಗೂ ಪ್ರೌಢಶಾಲಾ ಹಂತದಲ್ಲಿ ಒಂದು ಪತ್ರಿಕೆಯ ಎಲ್ಲಾ ಪುಟಗಳನ್ನು ಓದುವ ಹವಾಸವನ್ನು ರೂಢಿಸಿಕೊಳ್ಳಬೇಕು. ಗಣಿತ, ವಿಜ್ಞಾನ, ಇಂಗ್ಲಿಷ್‌ನಂತಹ ವಿಷಯಗಳನ್ನು ಪದೇಪದೇ ಬಿಡಿಸುವ ಮೂಲಕ ಸರಳೀಕರಣಕ್ಕೆ ಮುಂದಾಗಬೇಕು. ಹಾಸ್ಟೆಲ್‌ನಲ್ಲಿ ಕಲಿಯಲು ಬಂದಿರುವ ಪ್ರತಿ ಮಗುವಿನ ಪಾಲಕರು ಶ್ರಮಿಕರಾಗಿದ್ದಾರೆ. ಅವರ ಜೀವನ ದುಡಿಮೆಯ ಮೇಲೆ ಅವಲಂಬನೆಯಾಗಿರುತ್ತದೆ. ಅದನ್ನು ಗಮನದಲ್ಲಿಟ್ಟುಕೊಂಡು ಅಭ್ಯಾಸದ ಕಡೆಗೆ ಮಹತ್ವ ನೀಡಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ವೈದ್ಯ ಡಾ. ಕೆ.ಬಿ. ಧನ್ನೂರ, ಪ್ರತಿದಿನ ಬೆಳಿಗ್ಗೆ ಬೇಗ ಎದ್ದು ಯೋಗ, ವ್ಯಾಯಾಮ, ಪ್ರಾರ್ಥನೆ ಮಾಡುವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಚೆನ್ನಾಗಿ ಓದಿ ಸಾಧನೆ ಮಾಡುವ ಮೂಲಕ ಹಾಸ್ಟೆಲ್ ಹಾಗೂ ನಿಮ್ಮೂರಿನ ಕೀರ್ತಿಯನ್ನು ಹೆಚ್ಚಿಸಬೇಕು ಎಂದರು.

ಈ ವೇಳೆ ಗದಗ ರೋಟರಿ ಕ್ಲಬ್‌ನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನರೇಗಲ್ಲ ಪಟ್ಟಣದ ಡಾ. ಆರ್.ಕೆ. ಗಚ್ಚಿನಮಠ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ನಿಲಯ ಮೇಲ್ವಿಚಾರಕ ಪ್ರಭಾಕರ ಚಲವಾದಿ, ವಸಂತ ರಾಠೋಡ, ಸಿಬ್ಬಂದಿಗಳಾದ ಮಂಜುಳಾ ಕತ್ತಿಶೆಟ್ಟರ, ಸುರೇಶ ಮಾದರ, ಸರೋಜಾ ಲಮಾಣಿ ಇದ್ದರು.

### 'ಧರ್ಮದ ಉಳಿವಿಗಾಗಿ ಧರ್ಮಯುದ್ಧ' ಪ್ರತಿಭಟನೆಯಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ

# ಪುಣ್ಯಕ್ಷೇತ್ರಕ್ಕೆ ಕಳಂಕ ತರಲು ಹೊರಟಿದ್ದು ಖಂಡನೀಯ




■ವಿಜಯಸಾಕ್ಷಿ ಸುದ್ದಿ, ರೋಣ

ಪವಿತ್ರ ಹಿಂದೂ ಧಾರ್ಮಿಕ ಸ್ಥಳಗಳ ಪಾವಿತ್ರ್ಯಕ್ಕೆ ಧಕ್ಕೆ ತಂದರೆ ಅದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಹೇಳಿದರು.

ಅವರು ಸೋಮವಾರ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಧರ್ಮದ ಉಳಿವಿಗಾಗಿ ಧರ್ಮಯುದ್ಧ ಪ್ರತಿಭಟನೆ ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದರು.

ಧರ್ಮಸ್ಥಳ ಹಿಂದೂಗಳ ಪವಿತ್ರ ಕ್ಷೇತ್ರವಾಗಿದೆ. ಹೀಗಿದ್ದರೂ ಸಹ ಕೆಲ ಮತೀಯವಾದಿಗಳು ಪುಣ್ಯಕ್ಷೇತ್ರದ ಬಗ್ಗೆ ಇಲ್ಲ ಸಲ್ಲದ ಆರೋಪಗಳನ್ನು ಮಾಡಿ ಪುಣ್ಯಕ್ಷೇತ್ರಕ್ಕೆ ಕಳಂಕ ತರಲು ಹೊರಟಿದ್ದು ಖಂಡನೀಯ. ರಾಜ್ಯ ಸರಕಾರ ಇಂತಹ ಷಡ್ಯಂತ್ರವನ್ನು ಹೆಣೆದಿರುವ ಮತ್ತು ಅಪಪ್ರಚಾರ ಮಾಡಿರುವ ವ್ಯಕ್ತಿಗಳಿಗೆ ಕಠಿಣ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿದರು.


ಹಿಂದೂಗಳ ಧಾರ್ಮಿಕ ಭಾವನೆಗಳನ್ನು ಅಪಮಾನಿಸುವ ದುರುದ್ದೇಶದಿಂದಲೇ ಕೆಲ ಕಿಡಿಗೇಡಿಗಳು ಹಾಗೂ ಎಡ ಪಂಥೀಯರು ವಿದೇಶಿ ಹಣವನ್ನು ಪಡೆದು ಇಂತಹ ನೀಚ ಕೃತ್ಯಕ್ಕೆ ಇಳಿದಿರುವುದು ದುರಂತವೇ ಸರಿ. ರಾಜ್ಯ ಸರಕಾರ ಈ ವಿಷಯವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು ಮತ್ತು ಹಿಂದೂ ಧಾರ್ಮಿಕ ಕ್ಷೇತ್ರಗಳ ಬಗ್ಗೆ ಅಪಪ್ರಚಾರ ಮಾಡುವವರನ್ನು ಕೂಡಲೇ ಬಂಧಿಸಿ ಉಗ್ರ ಶಿಕ್ಷೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿದರು.

ತಹಸೀಲ್ದಾರ ನಾಗರಾಜ ಕೆ ಅವರಿಗೆ ಪ್ರತಿಭಟನಾಕಾರರು ಮನವಿ ಸಲ್ಲಿಸಿದರು. ರೋಣ ಮಂಡಲ ಅಧ್ಯಕ್ಷ ಉಮೇಶ ಮಲ್ಲಾಪೂರ, ಜಿ.ಪಂ ಮಾಜಿ ಅಧ್ಯಕ್ಷ ಎನ್.ಎಸ್. ಕೆಂಗಾರ, ಮುತ್ತಣ್ಣ ಕಡಗದ, ರಮೇಶ ಚವ್ಹಾಣ, ಹನ್ಮಂತಪ್ಪ ತಳವಾರ, ಇಂದಿರಾ ತೇಲಿ, ವಿಜಯಲಕ್ಷ್ಮೀ ಕೊಟಗಿ, ಕುಮಾರ ಪಲ್ಲೇದ ಸೇರಿದಂತೆ ಪಕ್ಷದ ಮುಖಂಡರುಗ, ಕಾರ್ಯಕರ್ತರು, ಶ್ರೀಕ್ಷೇತ್ರದ ಭಕ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಮುಖಂಡ ಅಶೋಕ ನವಲಗುಂದ ಮಾತನಾಡಿ, ಧರ್ಮಸ್ಥಳ ಹಿಂದೂಗಳು ಸೇರಿದಂತೆ ಎಲ್ಲ ಸಮಾಜದ, ಎಲ್ಲ ವರ್ಗದ ಜನರೂ ಭಕ್ತಿಯಿಂದ ನಡೆದುಕೊಳ್ಳುವ ಸನ್ನಿಧಿಯಾಗಿದೆ. ಇಂತಹ ಪವಿತ್ರ ಕ್ಷೇತ್ರಕ್ಕೆ ಧಕ್ಕೆ ತರುವ ಕೆಲಸದಲ್ಲಿ ಕಾಣದ ಕೈಗಳು ಸಹ ಇವೆ. ರಾಜ್ಯ ಸರಕಾರ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಪುಣ್ಯ ಕ್ಷೇತ್ರಕ್ಕೆ ಧಕ್ಕೆ ತಂದಿರುವ ಕಿಡಿಗೇಡಿಗಳಿಗೆ ಉಗ್ರ ಶಿಕ್ಷೆ ವಿಧಿಸಬೇಕು. ಇಲ್ಲದಿದ್ದರೆ ಬಿಜೆಪಿ ಪಕ್ಷದಿಂದ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಸರಕಾರವನ್ನು ಎಚ್ಚರಿಸಿದರು.

# ನಿಧನ

## ರೇಣುಕಾ ಇಮರಾಪೂರ



**ಗದಗ:** ಹೊಸದಿಗಂತ ದಿನಪತ್ರಿಕೆಯ ಗದಗ ಜಿಲ್ಲಾ ವರದಿಗಾರ ವೆಂಕಟೇಶ ಇಮ್ರಾಪೂರ ಅವರ ಮಾತೋಶ್ರೀ ಶ್ರೀಮತಿ ರೇಣುಕಾ ಬಸಪ್ಪ ಇಮರಾಪೂರ್ (76) ಅವರು ಸೋಮವಾರ ಸಂಜೆ 7 ಕ್ಕೆ ನಿಧನ ಹೊಂದಿದರು. ಮೃತರ ಅಂತಿಮಯಾತ್ರೆ ಮಂಗಳವಾರ ಬೆಳಿಗ್ಗೆ 10.30 ಕ್ಕೆ ಗಂಗಾಪೂರ್ ಪೇಟೆಯ ಅವರ ಸ್ವಗೃಹದಿಂದ ಹೊರಡಲಿದೆ.

## ಬೆಳ್ಳಟ್ಟಿಯಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಎಪಿಎಂಸಿ ಸಭಾಭವನದಲ್ಲಿ ಗದಗ ಲೋಕಾಯುಕ್ತ ಅಧಿಕಾರಿಗಳಿಂದ ಸೋಮವಾರ ಜನಸಂಪರ್ಕ ಸಭೆ ನಡೆಯಿತು.

ಈ ಸಂದರ್ಭದಲ್ಲಿ ವಡವಿ ಗ್ರಾಮದ ರಿ.ಸ.ನಂ. 134\4, ಮತ್ತು 61\4 ನೇದ್ದವುಗಳ ಹೊಸ ಶರ್ತು ಕಡಿಮೆ ಮಾಡಲು, ಬನ್ನಿಕೊಪ್ಪ ಗ್ರಾಮದ ಸ್ಮಶಾನಕ್ಕೆ ರಸ್ತೆ ನಿರ್ಮಾಣಕ್ಕೆ, ಬೆಳೆ ವಿಮೆ ಸರಿಯಾಗಿ ರೈತರಿಗೆ ಜಮಾ ಆಗದೇ ಇರುವುದಕ್ಕೆ ಬನ್ನಿಕೊಪ್ಪ ಗ್ರಾಮದ ರೈತರಿಂದ ಅರ್ಜಿ ಮತ್ತು ಬೆಳ್ಳಟ್ಟಿ ಗ್ರಾಮದಲ್ಲಿ ಭಾರೀ ವಾಹನಗಳ ಓಡಾಟದಿಂದ ರಸ್ತೆಗಳು ಹಾಳಾಗುತ್ತಿರುವ ಬಗ್ಗೆ ಅರ್ಜಿಗಳು ಸ್ವೀಕೃತವಾದವು.

ಸರಕಾರಿ ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸರಕಾರ ಕೊಡಮಾಡುವ ಎಲ್ಲ ಸೌಲಭ್ಯಗಳನ್ನು ನಿಗದಿತ ಸಮಯದಲ್ಲಿ ಸಮರ್ಪಕವಾಗಿ ತಲುಪಿಸಬೇಕು. ಆಹಾರದಲ್ಲಿ ಗುಣಮಟ್ಟವನ್ನು ಕಾಪಾಡಬೇಕು. ಸರಕಾರಿ ಶಾಲೆಗಳಲ್ಲಿಯೂ ಸಹ ಮಕ್ಕಳಿಗೆ ಮಧ್ಯಾಹ್ನ ವಿತರಿಸುವ ಊಟದಲ್ಲಿ ಗುಣಮಟ್ಟ ಹಾಗೂ ಸ್ವಚ್ಛತೆಯನ್ನು ಕಾಪಾಡಿ ಮಕ್ಕಳ ಸುರಕ್ಷತೆಯ ಬಗ್ಗೆಯೂ ಸಹ ಗಮನ ಹರಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಗದಗ ಲೋಕಾಯುಕ್ತ ಇನ್ಸಪೆಕ್ಟರ್‌ಗಳಾದ ಪರಮೇಶ್ವರ ಕವಟಗಿ, ಎಸ್.ಎಸ್. ತೇಲಿ, ಶಿರಸ್ತೇದಾರ ಮುಲ್ಲಾ ಮುಂತಾದವರು ಉಪಸ್ಥಿತರಿದ್ದರು.

ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರ, ಸಾಧಕರು, ನಿವೃತ್ತ ನೌಕರರಿಗೆ ಸನ್ಮಾನ

# ಅತ್ಯುನ್ನತ ಸಾಧನೆಗೆ ಶಿಕ್ಷಣವೊಂದೇ ಸಾಧನ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣವೊಂದೇ ಮನುಷ್ಯನನ್ನು ಅತ್ಯುನ್ನತ ಸ್ಥಾನಕ್ಕೆ ತಂದು ನಿಲ್ಲಿಸಬಲ್ಲದು. ಜೀವನದಲ್ಲಿ ಸಾಧನೆಗೆ ಶಿಕ್ಷಣ ರಾಜಮಾರ್ಗ, ಶಿಕ್ಷಣದ ದಾರಿದೀಪದಿಂದಾಗಿ ಬದುಕು ಸುಂದರವಾಗಿ ರೂಪುಗೊಳ್ಳಬಲ್ಲದು. ಆದ್ದರಿಂದ ಪಾಲಕರು ಮಕ್ಕಳ ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕೆಂದು ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿದರು.




ಅವರು ನಗರದ ಕನಕ ಭವನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕವು 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕಗಳನ್ನು ಪಡೆದ ಮುಸ್ಲಿಂ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಾಗರಿಕ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕಾಲವಿಂದು ಬದಲಾಗಿದೆ. ಇಂದಿನ ದಿನಗಳಲ್ಲಿ ಎಷ್ಟೇ ಪ್ರತಿಭೆ ಇದ್ದರೂ ಸಾಕಾಗದು. ಅದರೊಟ್ಟಿಗೆ ಚಾಣಾಕ್ಷತನ, ವಿಶೇಷ ಪರಿಣಿತಿ ಮುಖ್ಯ. ಈ ಎಲ್ಲ ಅಂಶಗಳನ್ನು ಹೊಂದಿರುವ ಅಭ್ಯರ್ಥಿಗೆ ಹೆಚ್ಚಿನ ಬೇಡಿಕೆ ಸಿಗುವದು. ಅಂತಹ ಅವಕಾಶಗಳು ಎಲ್ಲ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಿಗುವಂತಾಗಲಿ, ಅವರ ಬದುಕು ಬಂಗಾರವಾಗಲಿ ಎಂದರು.

ಸಮ್ಮುಖ ವಹಿಸಿದ್ದ ಅಡವೀಂದ್ರ ಸ್ವಾಮಿಮಠದ ಧರ್ಮದರ್ಶಿ ಪೂಜ್ಯ ಮಹೇಶ್ವರ ಸ್ವಾಮಿಗಳು, ಬಳಗಾನೂರಿನ ಮೌಲಾನಾ ಇನಾಯತ್‌ವುಲ್ಲಾ ಫೀರಜಾದೆ ಹಾಗೂ ಗದಗ ಗ್ರೇಸ್ ಇಸಿಐ ಚರ್ಚ್‌ನ ಸಭಾ ಪಾಲಕರಾದ ರೆವರೆಂಡ್ ವಸಂತರಾಜ ಮಾತನಾಡಿದರು. ಅಧ್ಯಕ್ಷತೆಯನ್ನು ಸಂಘದ ಜಿಲ್ಲಾ ಅಧ್ಯಕ್ಷ ಡಾ. ಸಿ.ಎಂ. ರಫೀ ವಹಿಸಿದ್ದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಕೆಪಿಸಿಸಿ ಜನರಲ್ ಸೆಕ್ರೆಟರಿ ಎಸ್.ಡಿ. ಮಕಾಂದಾರ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಕೆಪಿಸಿಸಿ ಕಾರ್ಮಿಕ ವಿಭಾಗದ ರಾಜ್ಯ ಉಪಾಧ್ಯಕ್ಷ ನೂರಅಹ್ಮದ್ ಕರ್ಜಗಿ, ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಸದಸ್ಯ ಎಂ.ಎಂ. ಕಾಗದಗಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ವ/ಗಾ ಜಿ ಸಂಸದ ಐ.ಜಿ. ಸನದಿ, ಸಂಘದ ಸಂಸ್ಥಾಪಕ, ರಾಜ್ಯ ಅಧ್ಯಕ್ಷ ಮೊಹ್ಮದ್‌ಸಲೀಂ ಹಂಚಿನಮನಿ, ಪ್ರಧಾನ ಕಾರ್ಯದರ್ಶಿ ಡಾ. ಇಸ್ಮಾಯಿಲ್ ಪಾಷಾ, ಕಾರ್ಯಾಧ್ಯಕ್ಷ ಅಬ್ದುಲ್‌ಖಾದರ ಮೆಣಸಗಿ, ಉಪಾಧ್ಯಕ್ಷರಾದ ಫರಹತ ಜಲಗೇರಿ, ನಿಯಾಜಅಹ್ಮದ್ ಹಂಚಿನಮನಿ, ಡಿಡಿಪಿಐ ಆರ್.ಎಸ್. ಬುರಡಿ ಉಪಸ್ಥಿತರಿದ್ದರು. ಡಿಎಸ್ಪಿ ಮುರ್ತುಜಾ ಖಾದ್ರಿ ಉಪನ್ಯಾಸ ನೀಡಿದರು.

ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ಮುಸ್ಲಿಂ ನೌಕರರಿಗೆ, ಸಾಧಕರಿಗೆ ಸನ್ಮಾನ ಜರುಗಿತು. ನಜೀರ್‌ಅಹ್ಮದ್ ಮುಲ್ಲಾ, ಬಿ.ಎಂ. ಮುಲ್ಲಾ, ಶ್ರೀಮತಿ ಶಿರಹಟ್ಟಿ ಪ್ರಾರ್ಥಿಸಿದರು, ಫಜಲ್‌ಅಹ್ಮದ್ ನಮಾಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಫರಹತ ಜಲಗೇರಿ ನಿರೂಪಿಸಿದರು, ಮೋದಿನಸಾಬ ಬುಕಿಟಗಾರ ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಸೂಡಿ ಜುಕ್ತಿ ಹಿರೇಮಠದ ಪೂಜ್ಯ ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ಮಾತನಾಡಿ, ವಿದ್ಯೆ ನಿರಂತರ ಸಾಧನೆಯಿಂದ ಸಾಕಾರಗೊಳ್ಳಬಲ್ಲದು. ಸಾಧನೆಗೆ ಅಸಾಧ್ಯವಾದದ್ದು ಯವುದೂ ಇಲ್ಲ. ಆದರೆ ಸಾಧಿಸಬೇಕೆಂಬ ಉತ್ಕಟ ಛಲ ಬೇಕು. ಶಿಕ್ಷಣ ಪಡೆದು ಉನ್ನತ ಹುದ್ದೆಯನ್ನು ಪಡೆದುಕೊಳ್ಳುವ ವಿದ್ಯಾರ್ಥಿಗಳು ಭವಿಷ್ಯದಲ್ಲಿ ತಂದೆ-ತಾಯಿಯನ್ನು, ದೇಶವನ್ನು ಚೆನ್ನಾಗಿ ನೋಡಿಕೊಳ್ಳಿ ಎಂದರಲ್ಲದೆ, ಈ ಸಂಘಟನೆ ಉತ್ತಮವಾಗಿ ಕಾರ್ಯ ಮಾಡುತ್ತಿದ್ದು ಬರಲಿರುವ ದಿನಗಳಲ್ಲಿ ಸಂಘಟನೆ ಇನ್ನೂ ಬಲಿಷ್ಠಗೊಳ್ಳಲಿ ಎಂದರು.



ದಾಸ ಸಾಹಿತ್ಯದಲ್ಲಿ ಗಣಿತ ಹಾಗೂ ತಂತ್ರಜ್ಞಾನ ವಿಷಯದ ಕುರಿತಾದ ಸಂಶೋಧನೆಯ ಮಾಡಿ ಸೌರಭ ದಾಸ ಸಾಹಿತ್ಯ ವಿಶ್ವವಿದ್ಯಾಲಯದಿಂದ ಪೂಜ್ಯ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರಿಂದ 'ದಾಸ ಚಿಂತನಮಣಿ' ಪ್ರಶಸ್ತಿಗೆ ಭಾಜನರಾದ ಕರಿಯಮ್ಮಕಲ್ಲು ಬಡಾವಣೆಯ ಶ್ರೀ ರಾಘವೇಂದ್ರ ಮಹಾಸ್ವಾಮಿಗಳವರ ಮಠದ ಅರ್ಚಕರು ಹಾಗೂ ರಂಗ ಕರ್ಮಕರ್ಮಿಗಳಾದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರಿಗೆ ಶ್ರೀಗುರು ರಾಯರ ಸದ್ಭಕ್ತರಾದ ಶ್ರೀನಿವಾಸ ಹುಬ್ಬಳ್ಳಿ, ಕಿರಟಗೇರಿಯ ಕಲ್ಮೇಶ್ವರಯ್ಯ ಹಿರೇಮಠ, ಎಸ್.ಟಿ. ವನ್ನಾಲ ಮತ್ತು ರಂಗಕರ್ಮಿ ಮೌನೇಶ ಬಿ.ಬಡಿಗೇರ(ನರೇಗಲ್ಲ) ಸನ್ಮಾನಿಸಿ ಗೌರವಿಸಿದರು.

## ಇಂದು ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 11 ಕೆವಿ ಬ್ಯಾಂಕ್-1ರ ಫಾಲ್ಟಿಬ್ಯಾಕಪ್ ರೀಲೆಯನ್ನು ಬದಲಾಯಿಸುವ ಕಾಮಗಾರಿ ಕೈಗೊಳ್ಳುವುದರಿಂದ ಆಗಸ್ಟ್ 26ರ ಮಧ್ಯಾಹ್ನ 1 ಗಂಟೆಯಿಂದ 3 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ ಕೈಗಾರಿಕಾ ನಿರಂತರ ಜ್ಯೋತಿ, ಇ.ಐ.ಪಿ, ಸೋಲಾರ್ ಐ.ಪಿ.ಪಿ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಎಂದು ಕಾರ್ಯನಿರ್ವಾಹಕ ಇಂಜಿನಿಯರರು (ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಹುವಿಸಕಂನಿ ಗದಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದೂ ಧರ್ಮ ಎಂದಿಗೂ ನಾಶವಾಗದು

▶▶ ಮೊದಲನೇ ಪುಟದಿಂದ

ವ್ಯಕ್ತಿಗಳು ಯಾರು ಮತ್ತು ಅವರು ಮಾಡುತ್ತಿರುವ ಸಂಚುಗಳ ಬಗ್ಗೆ ಸಮಗ್ರ ತನಿಖೆಯಾಗಬೇಕು. ಯೂಟ್ಯೂಬರ್‌ಗಳ ಮೇಲೆ ಸರಕಾರ ನಿರ್ದಿಷ್ಟ ಕ್ರಮಗಳನ್ನು ಕೈಗೊಳ್ಳಬೇಕು. ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನು ಅವಮಾನಿಸುತ್ತಿರುವ ಸಮಾಜ ವಿರೋಧಿ ವ್ಯಕ್ತಿಗಳನ್ನು ಪತ್ತೆ ಹಚ್ಚಿ ಅವರನ್ನು ಶಿಕ್ಷೆಗೆ ಒಳಪಡಿಸಬೇಕೆಂದು ಒತ್ತಾಯಿಸಿದರು. ರಾಜು ಕುಂಬಿ, ಮಹೇಶ ಹೊಗೆಸೊಪ್ಪಿನ, ಚಂಬಣ್ಣ ಬಾಳಿಕಾಯಿ, ಕಿರಣ್ ನವಲೆ, ಗಿರೀಶ ಅಗಡಿ, ಪ್ರವೀಣ ಬಾಳಿಕಾಯಿ, ಟಾಕಪ್ಪ ಸಾತಪೂತೆ, ಸೋಮಣ್ಣ ಡಾಣಗಲ್, ಶಂಕರ ಬ್ಯಾಡಗಿ, ಈರಣ್ಣ ಅಂಕಲಕೋಟಿ, ಅಭಯ ಜೈನ್, ನಾರಾಯಣಸಾ ಪವಾರ್, ತಿಪ್ಪಣ್ಣ ಸಂಶಿ, ಪುನೀತ್ ಓಲೇಕಾರ, ಪವನ್ ಬಂಕಾಪುರ, ನೀಲಪ್ಪ ಕರ್ಜಕ್ಕಣ್ಣವರ, ಗಿರೀಶ ಅಗಡಿ, ಅಮರಪ್ಪ ಗುಡಗುಂಟಿ, ಕಿರಣ ನವಲೆ, ಸಿ.ಆರ್. ಲಕ್ಕುಂಡಿಮಠ, ಸಂತೋಷ ಗೋಗಿ, ಅಶೋಕ ಬಟಗುರ್ಕಿ, ಎಂ.ಎನ್. ಬಾಡಗಿ, ವೈಭವ ಗೋಗಿ, ಸುರೇಶ ಹಟ್ಟಿ, ಚಂದ್ರು ಮಾಗಡಿ, ತಿಪ್ಪಣ್ಣ ಸಂಶಿ, ವಿನಯ ಪಾಟೀಲ, ಬಸವರಾಜ ಜಾಲಗಾರ, ಮಂಜು ಮುಳಗುಂದ ಸೇರಿದಂತೆ ಧರ್ಮಸ್ಥಳ ಸಂಘದ ಮಹಿಳೆಯರು, ಭಕ್ತರು ಸೇರಿ ಸಾವಿರಾರು ಜನರು ಪಾಲ್ಗೊಂಡಿದ್ದರು.

## ಸಮುದಾಯ ಭವನ ಕಾಮಗಾರಿಗೆ ಭೂಮಿಪೂಜೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ತಮ್ಮದೆನ್ನುವ ಎಲ್ಲವನ್ನೂ ಸಮಾಜದ ಉದ್ಧಾರಕ್ಕೆ ಧಾರೆ-ಯೆರೆದ ಶಿರಸಂಗಿಯ ಲಿಂಗರಾಜ ದೇಸಾಯಿಯವರ ಬದುಕು ಆದರ್ಶಮಯ ಹಾಗೂ ಮಾನವ ಕುಲಕ್ಕೆ ಮಾದರಿಯಾಗಿದೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಸಮೀಪದ ನಿಡಗುಂದಿ ಗ್ರಾಮದ ಕೆ.ಪಿ. ಅಣಗೌಡ್ರ ಅವರ ಜಾಗದಲ್ಲಿ ಇತ್ತೀಚೆಗೆ ನಡೆದ ತ್ಯಾಗವೀರ ಶಿರಸಂಗಿ ಲಿಂಗರಾಜರ ಸಮುದಾಯ ಭವನದ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಉತ್ತರ ಕರ್ನಾಟಕದ ಅನೇಕ ಶಿಕ್ಷಣ ಸಂಸ್ಥೆಗಳು ಬೆಳೆದು ಬರುವಲ್ಲಿ ಲಿಂಗರಾಜರ ಕಾಣಿಕೆ ಬಹಳಷ್ಟು ದೊಡ್ಡದಿದೆ. ಅವರ ದಾನ ಗುಣವನ್ನು ನಾವೆಲ್ಲರೂ ಅಳವಡಿಸಿಕೊಳ್ಳುವುದು ಅವಶ್ಯವಿದೆ. ದಾನಕ್ಕೆ ಹೆಸರಾಗಿದ್ದ ಶಿರಸಂಗಿಯ ಸಂಸ್ಥಾನದಲ್ಲಿ ಲಿಂಗರಾಜರು ನೀಡುತ್ತಿದ್ದ ನ್ಯಾಯ ಸರ್ವಸಮ್ಮತವಾಗಿರುತ್ತಿತ್ತು. ಹೀಗಾಗಿ ಅವರನ್ನು ಎಲ್ಲರೂ ಗೌರವದಿಂದ ಕಾಣುತ್ತಿದ್ದರು. ಬೆಳೆಯುವ ಮಕ್ಕಳಿಗೆ ಲಿಂಗರಾಜರ ಜೀವನ ಚರಿತ್ರೆಯ ಬಗ್ಗೆ ತಿಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಯುಸೂಫ್ ಇಟಗಿ, ಬಸವರಾಜ ನವಲಗುಂದ, ಶಶಿಧರ ಹೊಟ್ಟಿನ, ಅಂದಪ್ಪ ಅಣಗೌಡ್ರ, ವೀರೇಶ ಹೊಟ್ಟಿನ, ಕಳಕಪ್ಪ ಹೊಟ್ಟಿನ, ಪರಪ್ಪ ಅಣಗೌಡ್ರ, ವಿನೋದ ಇಟಗಿ, ಮಂಜುನಾಥ ಕಳಕಣ್ಣವರ, ಚಂದ್ರು ಗಂಗರಗೊಂಡ, ಪ್ರಸಾದ ಅಣಗೌಡ್ರ, ರಮೇಶ ಸೇಬಗೊಂಡ ಇದ್ದರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ( ಕಾವಾ), ಸಿದ್ಧಾರ್ಥ ನಗರ, ಮೈಸೂರು ಸಂಸ್ಥೆಯಲ್ಲಿ ಮಾಸ್ಟರ್ ಆಫ್ ವಿಜ್ಯುವಲ್ ಆರ್ಟ್ಸ್ (ಎಂ.ವಿ.ಎ) (ಎರಡು ಶೈಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಎಸ್.ಸಿ. ಪದ್ಧತಿ) ದೃಶ್ಯ ಕಲೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ. ಸ್ನಾತಕ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಆಫ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

ಸ್ನಾತಕೋತ್ತರ ಪದವಿಯಲ್ಲಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕೋತ್ತರ ಪದವಿಯಾಗಿರುತ್ತದೆ. ಪ್ರಥಮ ವರ್ಷದ ಮಾಸ್ಟರ್ ಆಫ್ ವಿಜ್ಯುವಲ್ ಆರ್ಟ್ಸ್ ( ಎಂ.ವಿ.ಎ) ಪ್ರವೇಶಾತಿಗಾಗಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಚೇರಿಯಿಂದ ಅರ್ಜಿಗಳನ್ನು ಪಡೆದು ಆಗಸ್ಟ್ 30 ರೊಳಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂರವಾಣಿ ಸಂಖ್ಯೆ 0821-2438931 ಸಂಪರ್ಕಿಸಬಹುದಾಗಿದೆ.

## ಕ್ರೀಡೆಗಳಿಂದ ಸಮಾಜಕ್ಕೆ ಉತ್ತಮ ಸಂದೇಶ



■ ವಿಜಯಸಾಕ್ಷಿ ಸುದ್ದಿ, ರೋಣ

ಕ್ರೀಡೆಗಳು ಕೇವಲ ದೇಹವನ್ನು ಗಟ್ಟಿಗೊಳಿಸುವ ಬದಲಾಗಿ ಸಮಾಜಕ್ಕೆ ಉತ್ತಮ ಸಂದೇಶವನ್ನು ಪಸರಿಸುತ್ತವೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಪಟ್ಟಣದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ಜರುಗಿದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ರೀಡೆಗಳಲ್ಲಿ ಏಕತೆ, ಸಮಾನತೆ, ಭ್ರಾತೃತ್ವ ಇರುತ್ತದೆ. ಮುಖ್ಯವಾಗಿ ನಮ್ಮ ದೇಶದ ಸಂಸ್ಕೃತಿಯೂ ಇವುಗಳನ್ನೇ ಭೋದಿಸಿದ್ದು, ಕ್ರೀಡಾಪಟುಗಳು ಸಮಾಜಕ್ಕೆ ಉತ್ತಮ ಸಂದೇಶವನ್ನು ನೀಡಬೇಕು, ಕ್ರೀಡಾ ಮನೋಭಾವನೆಯಿಂದ ಸ್ಪರ್ಧಿಸಬೇಕು. ಇಲ್ಲಿ ಸೋಲು-ಗೆಲವು ಮುಖ್ಯವಲ್ಲ, ಬದಲಾಗಿ ಪಾಲ್ಗೊಳ್ಳುವುದು ಮುಖ್ಯವಾಗಿದೆ ಎಂದರು.

ಯುವಕರು ಹಾಗೂ ವಿದ್ಯಾರ್ಥಿಗಳು ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಬೇಕು. ಇವತ್ತಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕ್ರೀಡೆಗಳಿಗೆ ಹೆಚ್ಚಿನ ಮಹತ್ವ ಇದೆ ಎಂಬುದು ಎಲ್ಲರೂ ತಿಳಿದಿರುವ ಸಂಗತಿ. ಕ್ರೀಡಾಪಟುಗಳು ಕ್ರೀಡೆಗಳಿಗಿರುವ ಮಹತ್ವವನ್ನು ಅರಿತುಕೊಂಡು, ತಮ್ಮ ನೆಚ್ಚಿನ ಕ್ರೀಡೆಯನ್ನು ಪೂಜ್ಯ ಭಾವನೆಯಿಂದ ಕಾಣಬೇಕು. ಅಂದಾಗ ಯಶಸ್ಸನ್ನು ಸಾಧಿಸಲು ಸಾಧ್ಯ ಎಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಕ್ರೀಡಾ ಜ್ಯೋತಿ ಸ್ವೀಕರಿಸಿದರು. ಶಾಲಾ ಮಕ್ಕಳಿಂದ ಪಥಸಂಚಲನ ನಡೆಯಿತು. ತಹಸೀಲ್ದಾರ ನಾಗರಾಜ ಕೆ, ಕ್ರೀಡಾ ಇಲಾಖೆಯ ನಿರ್ದೇಶಕ ಶರಣು ಗೋಗೇರಿ, ತಾ.ಪಂ ಇಒ ಚಂದ್ರಶೇಖರ ಕಂದಕೂರ, ಅಕ್ಷರ ದಾಸೋಹಾಧಿಕಾರಿ ಕೆ.ಎಲ್. ನಾಯಕ, ಸಿಪಿಐ ಎಸ್.ಎಸ್. ಬಿಳಗಿ, ಪಿಎಸ್‌ಐ ಪ್ರಕಾಶ ಬಣಕಾರ ಸೇರಿದಂತೆ ಪುರಸಭೆಯ ಸದಸ್ಯರು ಉಪಸ್ಥಿತರಿದ್ದರು.

ಈಶ್ವರ ಸಮುದಾಯ ಭವನ, ಈಶ್ವರ ಸೇವಾ ಟ್ರಸ್ಟ್ ಉದ್ಘಾಟಿಸಿದ ಸಚಿವ ಎಚ್.ಕೆ.ಪಾಟೀಲ

# ಬಸವಣ್ಣನವರ ವಚನಗಳು ಭಾಷಣ ವಸ್ತುವಾಗದಿರಲಿ



■ ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿ ಸಾಮಾಜಿಕ, ವೈಚಾರಿಕ ಕ್ರಾಂತಿ ಮಾಡಿದ ಬಸವಣ್ಣನವರ ವಚನ ಸಾಹಿತ್ಯವನ್ನು ನಾವಿಂದು ಭಾಷಣದ ವಸ್ತುವನ್ನಾಗಿ ಬಳಕೆ ಮಾಡಿಕೊಳ್ಳುತ್ತಿದ್ದೇವೆ. ಬದಲಾಗಿ ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತಂದುಕೊಳ್ಳಲು ಮುಂದಾಗಬೇಕಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ರವಿವಾರ ಗದುಗಿನ ರಾಜೀವ ಗಾಂಧಿ ನಗರದ ಈಶ್ವರ ಬಡಾವಣೆಯ ಶ್ರೀ ಈಶ್ವರ ಸಮುದಾಯ ಭವನ ಹಾಗೂ ಶ್ರೀ ಈಶ್ವರ ಸೇವಾ ಟ್ರಸ್ಟ್‌ನ್ನು ಉದ್ಘಾಟಿಸಿ, ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪ್ರವಚನ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಸಮಾರಂಭದ ಸಾನ್ನಿಧ್ಯವನ್ನು ಅಣ್ಣಿಗೇರಿ ದಾಸೋಹಮಠದ ಪೂಜ್ಯ ಸದ್ಗುರು ಡಾ. ಶಿವಕುಮಾರ ಮಹಾಸ್ವಾಮಿಗಳು ವಹಿಸಿದ್ದರು. ಅಧ್ಯಕ್ಷತೆಯನ್ನು ನಗರಸಭೆಯ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ವಹಿಸಿದ್ದರು.

ಆಧ್ಯಾತ್ಮಿಕ ಚಿಂತನ, ಧಾರ್ಮಿಕ ಕಾರ್ಯಕ್ರಮಗಳು ಜನರ ಬದುಕಿನಲ್ಲಿ ಸುಧಾರಣೆ ತರುವಂತಾಗಬೇಕು. ಅಂದಾಗ ಅದಕ್ಕೆ ಮಹತ್ವ ಬರುವದು. ಮಹಿಳಾ ಸಮುದಾಯ ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಯ್ದುಕೊಳ್ಳುವ ಮೂಲಕ ಸತ್ಸಂಗಳಿಂದ ಸಮಾಜದಲ್ಲಿ ಧಾರ್ಮಿಕ ಮನೋಭಾವನೆಯನ್ನು ಸ್ಫುರಿಸಿ ಸಮಾಜ ಸನ್ಮಾರ್ಗದೆಡೆಗೆ ಮುನ್ನಡೆಸುವಲ್ಲಿ ಕಾರಣರಾಗಿದ್ದಾರೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಕರ್ನಾಟಕ ವಾಣಿಜ್ಯರತ್ನ ಪ್ರಶಸ್ತಿ ಪುರಸ್ಕೃತ ಶರಣಬಸಪ್ಪ ಗುಡಿಮನಿ, ಜೀವಮಾನ ಸಾಧನೆ ಪ್ರಶಸ್ತಿ ಪುರಸ್ಕೃತ ಚಂದ್ರು ಬಾಳಿಹಳ್ಳಿಮಠ, ಗಣ್ಯರಾದ ರಮೇಶ ದಿನ್ನಿ, ಎಚ್. ಎನ್. ಚಿಗರಿ, ಸುಮಿತ್ರಾ ಭಜಂತ್ರಿ, ಕೆ.ಎಚ್. ಚಟ್ಟಿ, ಈರಣ್ಣ ಮುದಗಲ್ಲ ಅವರನ್ನು ಸನ್ಮಾನಿಸಲಾಯಿತು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಪಾಲ್ಗೊಂಡಿದ್ದರು.ಟ್ರಸ್ಟ್ ಕಾರ್ಯದರ್ಶಿ ಕೆ.ಬಿ. ಕಂಬಳಿ ಸ್ವಾಗತಿಸಿದರು, ಅಧ್ಯಕ್ಷ ಎಂ.ಜಿ. ಸಂತೋಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯ ಮೇಲೆ ಟ್ರಸ್ಟ್ ಗೌರವಾಧ್ಯಕ್ಷ ಚನ್ನಬಸಪ್ಪ ಅಕ್ಕಿ, ಸಂಘಟನಾ ಕಾರ್ಯದರ್ಶಿ ಚನ್ನಮ್ಮ ಸಂಶಿ ಉಪಸ್ಥಿತರಿದ್ದರು. ಪ್ರವಚನಕಾರರಾದ ಎಸ್.ಬಿ. ದೊಡ್ಡಣ್ಣವರ 13ನೇ ವರ್ಷದ ಶ್ರಾವಣ ಮಾಸದ ಪ್ರವಚನ ಸಂಪನ್ನಗೊಳಿಸಿದರು. ರತ್ನಾ ಮಂಟೂರಮಠ, ಮೋಹನ ಮೇರವಾಡೆ ಹಾಗೂ ಶಿವಶಂಕರ ದೊಡ್ಡಮನಿ ಅವರಿಂದ ಸಂಗೀತ ಜರುಗಿತು. ಮಂಜುಳಾ ಅಕ್ಕಿ ನಿರೂಪಿಸಿ ವಂದಿಸಿದರು.

ಕರ್ನಾಟಕ ಸರಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಹೆಬ್ಬಾಳ**

ತಾಲೂಕ : ಶಿರಹಟ್ಟಿ **e-mail : hebbal.shi.gdg@gmail.com** ಜಿಲ್ಲಾ : ಗದಗ

ನಂ: ಗ್ರಾ.ಪಂ./ಹೆಬ್ಬಾಳ/ಟೆಂಡರ/2025-26/00 ದಿನಾಂಕ:22-08-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2025-26ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

1) **INDENT NO : RDPR/2025-26/IND10919**

**ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. : Rs: 7.45 Lacks**

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-22-08-2025 ರಿಂದ 03-09-2025 ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ: 04-09-2025 ರಂದು 16.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ ಆಗಿದೆ/-**
**ಪಂಚಾಯತ ಅಭಿವೃದ್ಧಿ ಅದಿಕಾರಿಗಳು**
**ಗ್ರಾಮ ಪಂಚಾಯತ ಹೆಬ್ಬಾಳ**
**ತಾಲೂಕ: ಶಿರಹಟ್ಟಿ ಜಿಲ್ಲಾ : ಗದಗ.**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka